ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 111
8-10-2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 111

# ಜಾತಿವಾರು ಸಮೀಕ್ಷೆ : ರಾಜ್ಯದ ಎಲ್ಲಾ ಶಾಲೆಗಳಿಗೆ ಅ. 18ರ ವರೆಗೆ ರಜೆ ವಿಸ್ತರಣೆ





**ಬೆಂಗಳೂರು:** ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಿಗೆ ಇಂದಿನಿಂದ ಅಕ್ಟೋಬರ್ 18ರವರೆಗೆ ದಸರಾ ರಜೆಯನ್ನು ಸರ್ಕಾರ ವಿಸ್ತರಣೆ ಮಾಡಿದೆ.

ರಾಜ್ಯದಲ್ಲಿ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಯುತ್ತಿರುವ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಕಾರ್ಯ ಇಂದು ಪೂರ್ಣಗೊಳ್ಳಬೇಕಾಗಿತ್ತು. ಆದರೆ, ಇನ್ನೂ ಕೆಲವು ಜಿಲ್ಲೆಗಳಲ್ಲಿ ಸಮೀಕ್ಷೆ ಕಾರ್ಯ ಪೂರ್ಣಗೊಂಡಿಲ್ಲ. ಹೀಗಾಗಿ ಸಂಪುಟ ಸಹೋದ್ಯೋಗಿಗಳೊಂದಿಗೆ ಮುಖ್ಯಮಂತ್ರಿ ಚರ್ಚಿಸಿದ ನಂತರ ಮತ್ತೆ 10 ದಿನಗಳ ಕಾಲ ವಿಸ್ತರಿಸಲು ನಿರ್ಧರಿಸಲಾಗಿದೆ.

ಸಂಪುಟದ ಸಹೋದ್ಯೋಗಿಗಳು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಈ ನಿರ್ಧಾರ ಪ್ರಕಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಮೀಕ್ಷೆ ಕಾರ್ಯ ಕೆಲವು ಜಿಲ್ಲೆಗಳಲ್ಲಿ ಸಮೀಕ್ಷೆ ಕಾರ್ಯ ಬಹುತೇಕ ಪೂರ್ಣಗೊಂಡಿದ್ದರೆ, ಕೆಲವು ಕಡೆಗಳಲ್ಲಿ ಇನ್ನೂ ಪೂರ್ಣಗೊಂಡಿಲ್ಲ. ಕೊಪ್ಪಳ ಜಿಲ್ಲೆಯಲ್ಲಿ ಶೇ. 97, ಉಡುಪಿಯಲ್ಲಿ ಶೇ. 63, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ. 60 ರಷ್ಟು ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆ. ಶಾಲಾ ಶಿಕ್ಷಕರ ಮನವಿ ಮೇರೆಗೆ ಕ್ರಮ: ಅಕ್ಟೋಬರ್ 7 ರಂದು ಸಮೀಕ್ಷೆ ಪೂರ್ಣಗೊಳಿಸಲು ನಿರ್ಧರಿಸಿದ್ದೇವು. ಆದರೆ, ನಿರೀಕ್ಷೆಯಂತೆ ರಾಜ್ಯದ ಹಲವೆಡೆ ಸಮೀಕ್ಷೆ ಕಾರ್ಯ ಪೂರ್ಣಗೊಂಡಿಲ್ಲ. ರಾಜ್ಯದಲ್ಲಿ 1.20 ಲಕ್ಷ ಶಿಕ್ಷಕರು ಸಮೀಕ್ಷೆ ಕಾರ್ಯದಲ್ಲಿ ಭಾಗಿಯಾಗಿದ್ದು, ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಲು ದಸರಾ ರಜೆ ವಿಸ್ತರಣೆ ಮಾಡುವಂತೆ ರಾಜ್ಯ ಶಿಕ್ಷಕರ ಸಂಘ ಮನವಿ ಮಾಡಿತ್ತು. ಈ ಮನವಿ ಆಧಾರದ ಮೇಲೆ ರಜೆಯನ್ನು ಅಕ್ಟೋಬರ್ 18ರವರೆಗೆ ರಜೆಯನ್ನು ವಿಸ್ತರಣೆ ಮಾಡಲಾಗಿದೆ ಎಂದು ತಿಳಿಸಿದರು.

**ಬೆಂಗಳೂರಿನಲ್ಲಿ 6,700 ಶಿಕ್ಷಕರು:** ಬೆಂಗಳೂರಿನಲ್ಲಿ 46 ಲಕ್ಷ ಮನೆಗಳಿದ್ದು, 6,700 ಶಿಕ್ಷಕರನ್ನು ಸಮೀಕ್ಷೆಗೆ ಬಳಸಿಕೊಳ್ಳಲಾಗಿದೆ. ಒಟ್ಟು, 27,000 ಗಣತಿದಾರರನ್ನು ನಿಯೋಜಿಸಲಾಗಿದೆ. ದಿನಕ್ಕೆ 10 –15 ಮನೆಗಳ ಸಮೀಕ್ಷೆ ನಡೆಸುವ ಗುರಿ ನೀಡಲಾಗಿದೆ. ಬೆಂಗಳೂರಿನಲ್ಲಿ ನರಕ ಚತುರ್ದಷಿ ಒಳಗೆ ಸಮೀಕ್ಷೆ ಮುಗಿಸಲು ಸೂಚಿಸಲಾಗಿದೆ. ಶಿಕ್ಷಕರು ಕೂಡ ಇಷ್ಟರೊಳಗೆ ಸಮೀಕ್ಷೆ ಮುಗಿಸುವ ಭರವಸೆ ನೀಡಿದ್ದಾರೆ ಎಂದು ಸಿಎಂ ತಿಳಿಸಿದರು.

## ಮೃತರ ಕುಟುಂಬಕ್ಕೆ ರೂ.20 ಲಕ್ಷ ಪರಿಹಾರ

ಸರ್ವೆ ಕಾರ್ಯದಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಅವರ ಕುಟುಂಬಕ್ಕೆ ರೂ. 20 ಲಕ್ಷ ಪರಿಹಾರ ಕೊಡುತ್ತೇವೆ ಎಂದು ಮುಖ್ಯಮಂತ್ರಿ ತಿಳಿಸಿದರು.

## ಸಿಜೆಐ ಮೇಲೆ ಶೂ ಎಸೆತ ಪ್ರಕರಣ ಅತ್ಯಂತ ಖಂಡನೀಯ: ಎಲ್.ಎಚ್.ಅರುಣಕುಮಾರ್



**ದಾವಣಗೆರೆ:** ಸುಪ್ರೀಂಕೋರ್ಟಿನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ನಡೆದ ಶೂ ಎಸೆದ ಘಟನೆ ಅತ್ಯಂತ ಖಂಡನೀಯ ಮತ್ತು ಕಳವಳಕಾರಿ ಹಾಗೂ ಅಸಭ್ಯ ಕೃತ್ಯ. ಇಂತಹ ಕೃತ್ಯಗಳು ನ್ಯಾಯಾಂಗದ ಗೌರವ ಮತ್ತು ಘನತೆಗೆ ಧಕ್ಕೆಯುಂಟು ಮಾಡುತ್ತವೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷ ಎಲ್.ಎಚ್.ಅರುಣಕುಮಾರ್ ತಿಳಿಸಿದ್ದಾರೆ.

ಈ ನೆಲದ ಕಾನೂನು ಹಾಗೂ ಸಂವಿಧಾನಿಕ ಸ್ಥಾನಗಳನ್ನು ಗೌರವಿಸುವುದು ಎಲ್ಲರ ಜವಾಬ್ದಾರಿ. ಆದರೆ, ಅಸಭ್ಯತೆ, ಹಿಂಸೆ, ಅವಿನಯದ ನಡೆಗಳು ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಆಶಯಗಳಿಗೆ ಹಾನಿ ಉಂಟು ಮಾಡುತ್ತವೆ. ಸ್ವತಂತ್ರ್ಯ ನ್ಯಾಯಾಂಗ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಇಂತಹ ಕೃತ್ಯಗಳನ್ನು ದೇಶದ ಜನತೆ ಮತ್ತು ವಕೀಲರು ಒಗ್ಗೂಡಿ ಖಂಡಿಸಬೇಕು ಎಂದಿದ್ದಾರೆ.

ಇಂತಹ ಕೃತ್ಯದಿಂದ ಮುಖ್ಯ ನ್ಯಾಯಮೂರ್ತಿಗಳು ವಿಚಲಿತರಾಗದೇ ಕಾರ್ಯ ಕಲಾಪಗಳನ್ನು ನಡೆಸಿ, ಭಾರತದ ನ್ಯಾಯಾಂಗದ ದೃಢತೆ, ಗೌರವ, ಘನತೆಯನ್ನು ಎತ್ತಿ ಹಿಡಿದಿರುವುದು ಅತ್ಯಂತ್ಯ ಶ್ಲಾಘನೀಯವಾಗಿದೆ. ದೇಶದ ಸರ್ವೋಚ್ಛ ನ್ಯಾಯಪೀಠಕ್ಕೆ ಆದ ಇಂತಹ ಅಪಮಾನಗಳು ಮತ್ತೊಮ್ಮೆ ನಡೆಯದಂತೆ ಎಚ್ಚರ ವಹಿಸಬೇಕಾದ ಹೊಣೆಗಾರಿಕೆ ಪ್ರತಿಯೊಬ್ಬರ ಮೇಲಿದೆ ಎಂದು ಹೇಳಿದ್ದಾರೆ.

## ಎಲ್ಲರ ಹೃದಯ ಮಂದಿರದಲ್ಲಿ ರಾಮನ ಆದರ್ಶಗಳು ಮನೆ ಮಾಡಿವೆ: ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ



**ದಾವಣಗೆರೆ:** ಪ್ರತಿಯೊಬ್ಬರ ಹೃದಯ ಮಂದಿರದಲ್ಲಿ ರಾಮನ ಆದರ್ಶಗಳು ಮನೆ ಮಾಡಿದ್ದು ರಾಮನ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ದಾವಣಗೆರೆ ಲೋಕಸಭಾ ಸದಸ್ಯೆ ಡಾ.ಪ್ರಭ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಅಕ್ಟೋಬರ್ 7 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ಗುಡಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ರಾಮಾಯಾಣದಲ್ಲಿ ರಾಮ, ಸೀತೆ, ಲಕ್ಷಣ ಮತ್ತು ಭರತ ಸೇರಿದಂತೆ ಮಂಡೋದರಿ, ಶಬರಿ ಮತ್ತು ಹನುಮಂತನ ಪಾತ್ರಗಳನ್ನು ಕೇಳಿದ್ದೇವೆ. ಪ್ರತಿಯೊಂದು ಪಾತ್ರದ ಬಗ್ಗೆ ತಿಳಿದುಕೊಂಡಿದ್ದೇವೆ. ಪ್ರತಿಯೊಂದು ಪಾತ್ರದ ಬಗ್ಗೆ ತಿಳಿದುಕೊಂಡು ಅವರಂತೆ ಆದರ್ಶವಾಗಿ ಬದುಕಬೇಕು ಎಂದರು.

ರಾಮನ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು, ರಾಮನನ್ನು ಮಾರ್ಯಾದೆ ಪುರುಷ ಎಂದು ಕರೆಯುತ್ತಿದ್ದರು, ರಾಮನು ಕಾಡಿಗೆ ತೆರಳಿದ ಸಂದರ್ಭದಲ್ಲಿ ಭರತ ರಾಮನ ಪಾದುಕೆಗಳನ್ನು ತಂದು ಸಿಂಹಾಸನದ ಮೇಲೆ ಇಟ್ಟು ರಾಮನ ಆದರ್ಶಗಳನ್ನು ಅಳವಡಿಸಿಕೊಂಡು ರಾಜ್ಯಭಾರ ಮಾಡುತ್ತಾನೆ. ವನವಾಸದ ನಂತರ ಪುನಃ ಪಟ್ಟಾಭಿಷೇಕ ಮಾಡಿದರು. ಪರಸ್ಪರ ಹಿರಿಯರಿಗೆ ಗೌರವ ಸಹೋದರ ಬ್ರಾತೃತ್ವ ಪರಸ್ಪರ ಸತಿಪತಿ ಗೌರವಗಳನ್ನು ಕೊಡುವುದರ ಮೂಲಕ ಅವರು ಇತರರಿಗೆ ಮಾದರಿಯಾಗಿದ್ದಾರೆ. ನಾವು ಯಾವ ರೀತಿಯ ಆಡಳಿತವನ್ನು ನೀಡಬೇಕೆಂಬುದು ನಮ್ಮೆಲರಿಗೂ ಅವರ ರಾಜ್ಯ ಮಾದರಿಯಾಗಿದೆ ಎಂದರು.

ರಾಮಾಯಾಣ ದೇಶದಲ್ಲಿ ಮಾತ್ರವಲ್ಲದೆ ವಿದೇಶದಲ್ಲಿಯು ಅಧ್ಯಯನಗಳು ನಡೆದಿವೆ. ರಾಮಾಯಾಣವನ್ನು ಬೇರೆ ಬೇರೆ ಕವಿಗಳು ತಮ್ಮ ದೃಷ್ಟಿಕೋನದ ತಕ್ಕಂತೆ ಬರೆದಿದ್ದಾರೆ. 40 ವರ್ಷಗಳ ಹಿಂದೆ ದೂರದರ್ಶನದಲ್ಲಿ ರಾಮಾಯಾಣ ಪ್ರಸಾರವಾಗುತಿತ್ತು, ಆ ಸಂದರ್ಭದಲ್ಲಿ ನಮ್ಮ ಮನೆಯಲ್ಲಿ ಟಿವಿ ಇಲ್ಲವೆಂದರೂ ಸಹ ಪಕ್ಕದ ಮನೆಯಲ್ಲಿ ರಾಮಾಯಾಣವನ್ನು ವೀಕ್ಷಣೆ ಮಾಡುತ್ತಿದ್ದೇವು. ಅಷ್ಟೇ ಅಲ್ಲ ರಾಮಾಯಾಣ ಪ್ರಸಾರದ ಸಮಯದಲ್ಲಿ ರಸ್ತೆಗಳು ಎಲ್ಲಾ ಖಾಲಿ ಖಾಲಿ ಆಗಿರುತ್ತಿದ್ದವು ಎಂದರೆ ಆ ಪಾತ್ರಗಳು ನಮಗೆ ಅಷ್ಟು ಪ್ರಮುಖವಾಗಿದ್ದವು ಎಂದರು.

ಮಾಯಾಕೊಂಡ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಎಸ್. ಬಸವಂತಪ್ಪನವರು ಅಧ್ಯಕ್ಷತೆ ವಹಿಸಿ ಮಾತನಾಡಿ ಶ್ರೀ ವಾಲ್ಮೀಕಿ ಮಹರ್ಷಿಗಳು ರಾಮಾಯಾಣ ಮಹಾಕಾವ್ಯವನ್ನು ಕೊಟ್ಟಿದ್ದು ಅದು ಅದರದೇ ಆದತಂಹ ಛಾಪನ್ನು ಮೂಡಿಸಿದೆ. ವಾಲ್ಮೀಕಿ ನೀಡಿರುವ ಸಂದೇಶ ಇಡೀ ದೇಶದಲ್ಲಿ ಸಾಮರಸ್ಯ ಸಾರುವಂತಹದಾಗಿದೆ . ವಾಲ್ಮೀಕಿ ರಾಮಾಯಾಣವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಮಾತ್ರ ನಾವು ವಾಲ್ಮೀಕಿಗೆ ಕೊಡುವ ಗೌರವವಾಗಿದೆ. ಸರ್ಕಾರ ವಾಲ್ಮೀಕಿ ಜನಾಂಗಗಕ್ಕೆ ಅನೇಕ ಯೋಜನೆಗಳನ್ನು ಕೊಟ್ಟಿದೆ, ಅವುಗಳನ್ನು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು.

ಉಪನ್ಯಾಸ ನೀಡಿದ ಡಾ.ದಾದಾಪಿರ್ ನವಿಲೇಹಾಳ್ ರವರು ಕವಿಗಳು ಈ ಜಗತ್ತಿನ ಅನಧಿಕೃತ ಶಾಸಕರಾಗಿರುತ್ತಾರೆ ಎಂದು ಆಂಗ್ಲ ಕವಿ ಹೇಳಿದ್ದಾನೆ. ಪ್ರಪಂಚದಲ್ಲಿ ಏಳು ಮಹಾಕಾವ್ಯಗಳಿದ್ದು ಅವುಗಳಲ್ಲಿ ಸಂಸ್ಕೃತದ ಎರಡು ಮಹಾಕಾವ್ಯಗಳು ನಮ್ಮ ಭಾರತದವು ಅವುಗಳೆಂದರೆ ವಾಲ್ಮೀಕಿ ಶ್ರೀ ರಾಮಾಯಾಣ ಮತ್ತು ವ್ಯಾಸ ಕವಿ ರಚಿಸಿದ ಮಹಾಭಾರತ ಸೇರಿವೆ. ನಂತರ ಅನೇಕರು ರಾಮಾಯಾಣವನ್ನು ರಚಿಸಿದರು. ಆದರೆ ವಾಲ್ಮೀಕಿ ರಾಮಾಯಾಣದಂತಹ ಮಹಾಕಾವ್ಯ ಇನ್ನೊಂದಿಲ್ಲ ಎಂದರು.



## ಅ.9, 10ರಂದು ವಿಶೇಷ ಉಪನ್ಯಾಸ, ಪ್ರಶಸ್ತಿ ಪ್ರದಾನ ಸಮಾರಂಭ

**ದಾವಣಗೆರೆ:** ಬಿದರೆ ನಾರಾಯಣರಾವ್ ದತ್ತಿ ಯೋಜನೆ ಅಡಿಯಲ್ಲಿ ವಿಶೇಷ ಉಪನ್ಯಾಸ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭ ಬಿದರಿ ನಾರಾಯಣರಾವ್ ಮೆಮೋರಿಯಲ್ ಅವಾರ್ಡ್ ಇನ್ ಆರ್ಟ್ ಎಕ್ಸಲೆನ್ಸಿ ಕಾರ್ಯಕ್ರಮವನ್ನು 9ಮತ್ತು 10ರಂದು ಬೆಳಗ್ಗೆ 11 ಗಂಟೆಗೆ ದೃಶ್ಯಕಲಾ ಮಹಾವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಡಿ. ಕುಂಬಾರ್ ಅಧ್ಯಕ್ಷತೆ ವಹಿಸಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಿರಿಯ ಕಲಾವಿದ ಎ.ಎಂ ಪ್ರಕಾಶ್, ಕಲಾ ಇತಿಹಾಸಕಾರ ಮತ್ತು ವಿಮರ್ಶಕ ಕಿರಣ್ ಬಗಡೆ, ದತ್ತಿ ನಿಧಿ ದಾನಿಗಳಾದ ಹಿರಿಯ ಕಲಾವಿದ ಮತ್ತು ದೃಶ್ಯಕಲಾ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿ ಶ್ರೀನಾಥ ಬಿದರೆ ಪಾಲ್ಗೊಳ್ಳಲಿದ್ದು, ಮಹಾವಿದ್ಯಾಲಯದ ಪ್ರಾಂಶುಪಾಲ ಸತೀಶ ಕುಮಾರ್ ಪಿ. ವಲ್ಲೆಪುರಿ ಉಪಸ್ಥಿತರಿರುವರು. ಸಹಾಯಕ ಪ್ರಾಧ್ಯಾಪಕ ಡಾ ಜಯರಾಜ ಎಂ ಚಿಕ್ಕಪಾಟೀಲ, ಸಹ ಸಂಚಾಲಕ ಬೋಧನಾ ಸಹ ಪ್ರಾಧ್ಯಾಪಕರಾದ ದತ್ತಾತ್ರೇಯ ಎನ್ ಭಟ್ ಉಪಸ್ಥಿತರಿರುವರು. ಅಂದು ಬೆಳಗ್ಗೆ 11 ರಿಂದ ಒಂದು ಗಂಟೆವರೆಗೆ ಪ್ರಶಸ್ತಿ ಪ್ರಧಾನ ಸಮಾರಂಭ ಮತ್ತು ಮಧ್ಯಾಹ್ನ 2:30 ರಿಂದ 5 ಗಂಟೆವರೆಗೆ ವಿದ್ಯಾರ್ಥಿಗಳು ಮತ್ತು ಕಲಾವಿದರೊಂದಿಗೆ ಸಂವಾದ ಕಾರ್ಯಕ್ರಮ ನಡೆಯಲಿದೆ. ಅ.10 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1 ರವರೆಗೆ ಹಿರಿಯ ಕಲಾವಿದ ಎ.ಎಂ ಪ್ರಕಾಶ್ ಇವರಿಂದ ದೃಶ್ಯ ಭಾಷೆ ವಿಷಯ ಕುರಿತು ವಿಶೇಷ ಉಪನ್ಯಾಸ ನಡೆಯಲಿದೆ.

## ವಾಲ್ಮೀಕಿ ಮಹರ್ಷಿ ಸತ್ಪುರುಷರ ಜೀವನ ಆದರ್ಶ ಇಂದಿಗೂ ನಮ್ಮೆಲ್ಲರಿಗೂ ಮೇಲ್ಪಂಕ್ತಿಯಾಗಿದೆ




**ಹೊನ್ನಾಳಿ :** ವಾಲ್ಮೀಕಿ ಮಹರ್ಷಿ ಇಡೀ ಜಗತ್ತಿಗೆ ಶ್ರೇಷ್ಠ ಮಹಾಕಾವ್ಯ ರಾಮಾಯಾಣವನ್ನು ನೀಡಿ–ದ್ದಾರೆ, ಇಂತಹ ಮಹಾನ್ ಸತ್ಪುರುಷರ ಜೀವನ ಆದರ್ಶ ಇಂದಿಗೂ ನಮ್ಮೆಲ್ಲರಿಗೂ ಮೇಲ್ಪಂಕ್ತಿಯಾಗಿದೆ ಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ಪಟ್ಟಣದ ಪುರಸಭೆಯ ಆವರಣದ ಕನಕದಾಸ ರಂಗಮಂದಿರದಲ್ಲಿ ಮಂಗಳವಾರ ಸಮಾಜ ಕಲ್ಯಾಣ ಇಲಾಖೆಯಿಂದ ಆಯೋಜಿಸಿದ್ದ ಆದಿ ಕವಿ ಹಾಗೂ ಶ್ರೇಷ್ಠ ಸಂತ ಮಹರ್ಷಿ ವಾಲ್ಮೀಕಿ ಜಯೋತ್ಸೋವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಂತಹ ಮಹಾನ್ ದಾರ್ಶನಿಕ ವಾಲ್ಮೀಕಿ ಮಹರ್ಷಿಗಳನ್ನು ಕೇವಲ ಒಂದು ಜಾತಿಗೆ ಸೀಮಿತಿಗೊಳಿಸುವುದು ಸಲ್ಲದು ನಾವೆಲ್ಲರೂ ಸೇರಿ ಇಂತಹ ಮಹಾನ್ ಋಷಿಗಳ ಜನ್ಮಜಯಂತಿಯನ್ನು ಆಚರಿಸಿದರೆ ಮಾತ್ರ ಜಯಂತಿ ಕಾರ್ಯಕ್ರಮಗಳು ಸಾರ್ಥಕ ಪಡೆಯುತ್ತವೆ ಎಂದರು.

ವಾಲ್ಮೀಕಿ ಮಹಾರ್ಷಿಯು ಶ್ರೇಷ್ಟ ಕವಿ ಮತ್ತು ಋಷಿಮುನಿಗಳಾಗಿದ್ದು 24 ಸಾವಿರ ಶ್ಲೋಕಗಳೊಂದಿಗೆ 7 ಕಾಂಡಗಳನ್ನು ಒಳಗೊಂಡ ರಾಮಾಯಣ ಗ್ರಂಥವನ್ನು ದೇಶದ ಪ್ರತಿಯೊಬ್ಬನೂ ಪೂಜಿಸುತ್ತಾನೆ ಅಂತಹ ಶ್ರೇಷ್ಠ ಗ್ರಂಥ ರಾಯಾಯಾಣ ಎಂಬ ಹಿರಿಮೆ ನಮ್ಮ ದೇಶದ್ದು ಎಂದರು.

ರಾಮನಿಗೆ ದೈವತ್ವ ನೀಡಿದ್ದು ವಾಲ್ಮೀಕಿಯವರು ದೇಶದ ಸಂಸ್ಕೃತಿ,ಸಂಸ್ಕಾರ ಹಾಗೂ ಸನ್ಮಾರ್ಗದ ಮೂಲಕ ತನ್ನ ಜೀವನ ಹೇಗೆ ಸಾಗಿಸಬಹುದು ಎಂಬುದನ್ನು ವಾಲ್ಮೀಕಿ ಮಹಾರ್ಷಿ ತಮ್ಮ ಗ್ರಂಥದಲ್ಲಿನ ಉಲ್ಲೇಖವನ್ನು ಶ್ರೀರಾಮನ ಜೀವನದ ಮೂಲಕ ತೋರಿಸಿಕೊಟ್ಟಿದ್ದಾರೆ ಎಂದರು.

ಪೊಲೀಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್ ಮಾತನಾಡಿ, ಶ್ರೇಷ್ಠ ಸಂತ ವಾಲ್ಮೀಕಿ ಮಹರ್ಷಿಗಳ ಬಗ್ಗೆ ಇತಿಹಾಸದಲ್ಲಿ ಹಲವು ರೀತಿಯಲ್ಲಿ ಅವರ ಬದುಕನ್ನು ವ್ಯಾಖ್ಯಿನಿಸಿದ್ದಾರೆ, ಅವರೊಬ್ಬ ಬೇಟೆ–ಗಾರರಾಗಿದ್ದರು ಎಂದು ಇತಿಹಾಸದಲ್ಲಿ ಹೇಳುತ್ತಿರುವುದು ಕಂಡು ಬಂದಿದೆ, ಇನ್ನೂ ಕಲವರು ಅವರನ್ನು ದರೋಡೆಗಾರರು,ಮುನಿಗಳ ಪುತ್ರ ಹೀಗೆ ಬೇರೆ ಬೇರೆ ರೀತಿಯಲ್ಲಿ ಎಂದು ಪರಿಚಯಿಸುವುದು ಸಮಂಜಸವಲ್ಲ,ಈ ಬಗ್ಗೆ ಇತಿಹಾಸಕಾರರು ವಾಲ್ಮೀಕಿ ಮಹರ್ಷಿಗಳ ಬಗ್ಗೆ ಸಂಪೂರ್ಣ ಅಧ್ಯಾಯನ ಮಾಡಿ ಅವರ ಗೌರವ ಜೀವನ ಇತಿಹಾಸವನ್ನು ಸಮಾಜಕ್ಕೆ ತಿಳಿಸಬೇಕು ಎಂದು ಮನವಿ ಮಾಡಿದರು.

ಮರ್ಯಾದ ಪುರುಷೋತ್ತಮ್ಮ ಶ್ರೀರಾಮನ ಆದರ್ಶ,ಸೀತಾಮಾತೆ,ಹಾಗೂ ಲವಕುಶರ ದೈವತ್ವದ ಬಗ್ಗೆ ವಿಶ್ವಕ್ಕೆ ಪರಿಚಯಿಸಿದ ಮಹರ್ಷಿ ವಾಲ್ಮೀಕಿಯವರಿಗೂ ದೈವತ್ವ ಇರುತ್ತದೆ. ಆ ಬಗ್ಗೆ ಅಧ್ಯಾಯನವಾಗಲಿ ಎಂದರು.

ರಾಜ್ಯ ಬಯಲು ಸೀಮೆ ಪ್ರದೇಶಾಭಿವೃದ್ಧಿ ನಿಗಮದ ಅಧ್ಯಕ್ಷ ಎಚ್.ಬಿ. ಮಂಜಪ್ಪ ಮಾತನಾಡಿದರು. ವಾಲ್ಮೀಕಿ ಸಮಾಜದ ತಾಲೂಕು ಅಧ್ಯಕ್ಷ ನಾಗೇಂದ್ರಪ್ಪ. ಉಪನ್ಯಾಸಕ ಬಸವರಾಜು ವಿಶೇಷ ಉಪನ್ಯಾಸ ನೀಡಿದರು.ತಹಸೀಲ್ದಾರ್ ರಾಜೇಶ್‌ಕುಮಾರ್, ಮಾತನಾಡಿದರು.

ವಾಲ್ಮೀಕಿ ಸಮಾಜದ ಮುಖಂಡರಾದ ಕೋಣನತಲೆ ನಾಗಪ್ಪ,ಬೇಲಿಮಲ್ಲೂರು ಶಿವಾನಂದ್,ಕುಳಗಟ್ಟೆ ರಂಗನಾಥ್, ಮಾರಿಕೊಪ್ಪದ ತಿಮ್ಮಪ್ಪ,ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಉಮಾ,ಬಿಇಒ ನಿಂಗಪ್ಪ,ಸರ್ಕಾರಿ ನೌಕರರ ಸಂಘದತಾಲೂಕಾಧ್ಯಕ್ಷಅರುಣ್‌ಕುಮಾರ್,ಆರ್,ನಾಗಪ್ಪ ಹಾಗೂ ಇತರರು ಇದ್ದರು.

## ಹುಲಿಗೆಮ್ಮ ದೇವಸ್ಥಾನಕ್ಕೆ ಪಾದಯಾತ್ರೆಯಲ್ಲಿ ತೆರಳುತ್ತಿದ್ದವರ ಮೇಲೆ ಬಸ್ ಹರಿದು ಮೂವರ ಭಕ್ತರ ದುರ್ಮರಣ



**ಕೊಪ್ಪಳ,ಅ.7–**ಪವಿತ್ರ ಪುಣ್ಯ ಕ್ಷೇತ್ರ ಹುಲಿಗೆಮ್ಮ ದೇವಸ್ಥಾನಕ್ಕೆ ಪಾದಯಾತ್ರೆಯಲ್ಲಿ ಹೋಗುತ್ತಿದ್ದವರ ಮೇಲೆ ಖಾಸಗಿ ಬಸ್ ಹರಿದು ಮೂವರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, ನಾಲ್ವರು ಗಂಭೀರ ಗಾಯಗೊಂಡಿರುವ ಘಟನೆ ಕೂಕನಪಳ್ಳಿ ಗ್ರಾಮದ ಬಳಿ ಕಳೆದ ರಾತ್ರಿ ನಡೆದಿದೆ.

ಮೃತರನ್ನು ಗದಗ ಜಿಲ್ಲೆಯ ರೋಣ ತಾಲೂಕಿನ ತಳ್ಳಿಹಾಳ ಗ್ರಾಮದ ನಿವಾಸಿಗಳಾದ ಅನ್ನಪೂರ್ಣ(40), ಪ್ರಕಾಶ್(25), ಶರಣಪ್ಪ(19) ಎಂದು ಗುರುತಿಸಲಾಗಿದೆ. ಗಾಯಗೊಂಡಿರುವ ನಾಲ್ವರನ್ನು ಕೊಪ್ಪಳ ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲು ಮಾಡಲಾಗಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ತಳ್ಳಿಹಾಳ ಗ್ರಾಮದಿಂದ ಹಲವರು ಕಾಲ್ನಡಿಗೆಯಲ್ಲಿ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ಹುಲಿಗೆಮ ದೇವಸ್ಥಾನಕ್ಕೆ ಶನಿವಾರ ಪಾದಯಾತ್ರೆ ಆರಂಭಿಸಿದ್ದರು. ರಾತ್ರಿ ಸಿಂದಗಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಖಾಸಗಿ ಸ್ಲೀಪರ್ ಕೋಚ್ ಬಸ್ ಈ ಪಾದಯಾತ್ರಿಗಳ ಮೇಲೆ ಹರಿದಿದ್ದರಿಂದ ಮೂವರು ಪ್ರಾಣ ಕಳೆದುಕೊಂಡಿದ್ದಾರೆ.

ಇನ್ನು ಕೇವಲ ಕೇವಲ 3 ಗಂಟೆ ಕಳೆದಿದ್ದರೆ ಇವರು ದೇವಸ್ಥಾನ ತಲುಪುತ್ತಿದ್ದರು. ಆದರೆ ವಿಧಿಯಾಟದಲ್ಲಿ ಮೂವರು ಜೀವ ಕಳೆದುಕೊಂಡಿರುವುದು ದುರ್ದೈವ.ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ, ವಾಹನವನ್ನು ವಶಕ್ಕೆ ಪಡೆದು ಚಾಲಕನನ್ನು ಬಂಧಿಸಿದ್ದಾರೆ.ಘಟನಾ ಸ್ಥಳಕ್ಕೆ ಎಸ್ಪಿ ಡಾ ರಾಮ್ ಅರಸಿದ್ದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಪ್ರಸ್ತಾವನೆ: ಜಿಲ್ಲಾಧಿಕಾರಿ

**ದಾವಣಗೆರೆ :** ಜಾತಿ ಜನಗಣತಿ ಸಮೀಕ್ಷೆ ವೇಳೆ ಹೃದಯಾಘಾತಕ್ಕೀಡಾಗಿ, ಶಸ್ತ್ರಚಿಕಿತ್ಸೆಗೆ ಒಳಗಾದ ತಾಲೂಕಿನ ಹಳೆ ಕಡ್ಲೇಬಾಳು ಗ್ರಾಮದ ಶಾಲಾ ಶಿಕ್ಷಕ ಶಿವಪ್ರಕಾಶ ನಾಯ್ಕ ಚಿಕಿತ್ಸಾ ವೆಚ್ಚ ಭರಿಸುವಂತೆ ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿರುವುದಾಗಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಸಮೀಕ್ಷೆಗೆ ತೆರಳಿದ್ದ ವೇಳೆ ರಾಜ್ಯದ ವಿವಿಧೆಡೆ ಮೃತಪಟ್ಟ ಮೂವರ ಕುಟುಂಬ ವರ್ಗಕ್ಕೆ ತಲಾ 15 ಲಕ್ಷ ರೂ. ಪರಿಹಾರವನ್ನು ಆಯೋಗದಿಂದ ನೀಡಲಾಗುತ್ತಿದೆ. ಅಲ್ಲದೇ. ಗಣತಿ ಕಾರ್ಯದ ವೇಳೆ ಹೃದಯಾಘಾತ, ನಾಯಿ ಕಡಿತ ಕೇಸ್ ಗಳು ವರದಿಯಾಗುತ್ತಿರುವ ಬಗ್ಗೆಯೂ ಅ.8ರಂದು ಆಯೋಗದ ಸದಸ್ಯರು ಸಭೆ ಸೇರಿ, ಚರ್ಚಿಸುವ ಭರವಸೆ ನೀಡಿದ್ದಾರೆ. ಹಳೆ ಕಡ್ಲೆಬಾಳು ಗ್ರಾಮದ ಶಿಕ್ಷಕನಿಗೆ ಹೃದಯಾಘಾತ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಕಿತ್ಸಾ ವೆಚ್ಚ ಭರಿಸುವಂತೆ ಪ್ರಸ್ತಾವನೆ ಸಲ್ಲಿಸಿದ್ದೇವೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ಮಹರ್ಷಿ ವಾಲ್ಮೀಕಿ ಬರೆದ ರಾಮಾಯಣ ಜ್ಞಾನದ ಭಂಡಾರ: ಶಾಸಕ ಬಿ.ದೇವೇಂದ್ರಪ್ಪ




**ಜಗಳೂರು:** ಮಹರ್ಷಿ ವಾಲ್ಮೀಕಿ ಬರೆದ ರಾಮಾಯಣ ಜ್ಞಾನದ ಭಂಡಾರ. ಒಬ್ಬ ವ್ಯಕ್ತಿಯ ಭೂತಕಾಲ ಅಥವಾ ಅವನ ಜೀವನದ ಹಿಂದಿನ ದಿನಗಳನ್ನು ಮರೆತು, ಮುಂದಿನ ದಿನಗಳಲ್ಲಿ ಉತ್ತಮ ಮಾರ್ಗವನ್ನು ಅನುಸರಿಸುವ ಮೂಲಕ ಸಮಾಜದಲ್ಲಿ ತನ್ನದೇ ಆದ ಹೆಸರನ್ನು ಗಳಿಸುವುದು ಹೇಗೆ ಎಂಬುದನ್ನು ವಾಲ್ಮೀಕಿಯ ಜೀವನದಿಂದ ನಾವೆಲ್ಲಾ ಕಲಿಯಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಮಂಗಳವಾರ ನಡೆದ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

34 ಮಹಾನ್ ವ್ಯಕ್ತಿಗಳ ಆಚರಣೆಗಳನ್ನು ರಾಷ್ಟ್ರೀಯ ಹಬ್ಬಗಳ ಆಚರಣೆಯಲ್ಲಿ ಆರಾಧಿಸುತ್ತೇವೆ. ಇನ್ನುಮುಂದೆ ಪ್ರತಿ ಮಹಾನ್ ವ್ಯಕ್ತಿಯ ಸಾಧನೆಗಳನ್ನು ತಿಳಿಯಲು ರಸಪ್ರಶ್ನೆಯ ರೀತಿಯಲ್ಲಿ ಮಾಡಬೇಕು. ಕೇವಲ ಹಾದಿ, ಬೀದಿಗಳಲ್ಲಿ, ನಾಲ್ಕು ಗೋಡೆಗಳ ಮಧ್ಯೆ ನಾಮಕಾವಸ್ತೆಗೆ ಮಾಡದೇ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಅರ್ಥಗರ್ಭಿತವಾಗಿ ತಿಳಿಯುವಂತೆ ಮಾಡಬೇಕು. ಇದೇ ಅ.13 ರಂದು ಮಧಕರಿನಾಯಕರ ಜಯಂತಿ ಇದ್ದು, ಮಾಜಿ ಶಾಸಕರು, ಎಲ್ಲ ಸಮುದಾಯದ ಮುಖಂಡರನ್ನು ಕರೆದು ಅರ್ಥಪೂರ್ಣವಾಗಿ ವಾಲ್ಮೀಕಿ ಜಯಂತಿಯದನ್ನು ಅದ್ದೂರಿಯಾಗಿ ಆಚರಿಸೋಣ. ಆಚರಿಸೋಣ ಎಂದರು.

ನಿವೃತ್ತ ಉಪನ್ಯಾಸಕ ಹನುಮಂತಾಪುರ ರಾಜಪ್ಪ ಮಾತನಾಡಿ, ರಾಮಾಯಣ ಹೇಗೆ ರಚನೆಯಾದವು ಎಂಬುದರ ಬಗ್ಗೆ ಒಂದು ಕಥೆ ಇದೆ. ಈ ಕಥೆಯ ಪ್ರಕಾರ, ವಾಲ್ಮೀಕಿ ಮಹರ್ಷಿಗಳ ಮೊದಲನೇ ಹೆಸರು ರತ್ನಾಕರ. ಈತ ಡಕಾಯಿತನಾಗಿದ್ದ. ಆದರೆ ಒಮ್ಮೆ ನಾರದ ಮುನಿಗಳ ಭೇಟಿಯಿಂದ ಅವನ ಮನಸ್ಸು ಮತ್ತು ಗುಣಗಳು ಬದಲಾದವು. ಅವನು ತನ್ನ ಜೀವನವನ್ನು ತಪಸ್ಸು ಮತ್ತು ಧ್ಯಾನದಲ್ಲಿ ತೊಡಗಿಸಿಕೊಂಡನು. ಒಂದು ದಿನ ವಾಲ್ಮೀಕಿ ಮಹರ್ಷಿಗಳು ನದಿಯ ದಡದಲ್ಲಿ ಕುಳಿತು ಧ್ಯಾನ ಮಾಡುತ್ತಿದ್ದಾಗ ರಾಮಾಯಣ ಬರೆಯುವುದಕ್ಕೆ ಸ್ಫೂರ್ತಿಯನ್ನು ಪಡೆದುಕೊಂಡರು ಎಂದು ವಾಲ್ಮೀಕಿ ಬಗ್ಗೆ ಉಪನ್ಯಾಸ ನೀಡಿದರು.

ತಹಶೀಲ್ದಾರ್ ಸೈಯದ್ ಕಲೀಂ ಉಲ್ಲ, ಕಾಂಗ್ರೆಸ್ ಮುಖಂಡ ಕೆ.ಪಿ.ಪಾಲಯ್ಯ ಮಾತನಾಡಿ, ಬಿಇಒ ಈ.ಹಾಲಮೂರ್ತಿ, ಸಿ.ತಿಪ್ಪೇಸ್ವಾಮಿ, ವಕೀಲ ಆರ್. ಓಬಳೇಶ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಪಂ ಇಒ ಕೆಂಚಪ್ಪ ನಾಯಕ ಸಂಘದ ತಾ.ಅಧ್ಯಕ್ಷ ನಾಗರಾಜ್, ಕಾರ್ಯದರ್ಶಿ ನಾಗರಾಜ್, ಬಿ.ಮಹೇಶ್ವರಪ್ಪ, ಸಿ.ತಿಪ್ಪೇಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಎಸ್ಟಿ ಅಧಿಕಾರಿ ರಾಘವೇಂದ್ರ, ಇದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹದು ಎಂಬುದು ಇಂದು ನಿಮಗೆ ಅರ್ಥವಾಗಬಹುದು. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ.

### ವೃಷಭ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಬಿಡುವಿನ ಸಮಯವನ್ನು ನಿಸ್ವಾರ್ಥ ಸೇವೆಯಲ್ಲಿ ವಿನಿಯೋಗಿಸಿ. ಇದು ನೀವು ಮತ್ತು ನಿಮ್ಮ ಕುಟುಂಬಕ್ಕೆ ಸಂತೋಷ ನೀಡುತ್ತದೆ. ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ. ಯಾವುದೇ ಜಂಟಿ ಯೋಜ್ನಯ್ಲಲಿ ಭಾಗವಹಿಸಬೇಡಿ – ಪಾಲುದಾರರು ನಿಮ್ಮ ಲಾಭ ಪಡೆಯಲು ಪ್ರಯತ್ನಿಸುತ್ತಾರೆ.

### ಮಿಥುನ ರಾಶಿ

ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಪತ್ನಿಯೊಂದಿಗೆ ಜಗಳ ಮಾನಸಿಕ ಒತ್ತಡಕ್ಕೆ ಕಾರಣವಾಗಬಹುದು. ಅನವಶ್ಯಕ ಒತ್ತಡ ತೆಗೆದುಕೊಳ್ಳುವ ಅಗತ್ಯವಿಲ್ಲ. ಜೀವನದಲ್ಲಿ ಮಹತ್ವದ ವಿಷಯವೆಂದರೆ ನಾವು ಮಾರ್ಪಡಿಸಲು ಸಾಧ್ಯವಿಲ್ಲದ ವಿಷಯಗಳನ್ನು ಒಪ್ಪಿಕೊಳ್ಳಲು ಕಲಿಯುವುದಾಗಿದೆ.

### ಕರ್ಕ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ. ಪ್ರಣಯ ಸಂತೋಷಕರವೂ ಮತ್ತು ಅದ್ಭುತವೂ ಆಗಬಹುದು.

### ಸಿಂಹ ರಾಶಿ

ನಿಮ್ಮ ಅಧಿಕ ಚೈತನ್ಯವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ಆರಾಮ–ಆನಂದ ಮತ್ತು ಭಾವಪರವಶತೆಯನ್ನು ನೀವು ಕಾಣುವುದರಿಂದ ನಿಮ್ಮ ಕೆಲಸ ಹಿಂದೆ ಬೀಳುತ್ತದೆ. ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ

### ಕನ್ಯಾ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನ ಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು, ಇದು ಮನೆಯಲ್ಲಿ ಆತಂಕದ ಕ್ಷಣಗಳು ತರುತ್ತದೆ.

### ತುಲಾ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ. ಚಿಂತಿಸಬೇಡಿ, ನಿಮ್ಮ ದುಃಖ ಇಂದು ಮಂಜುಗಡ್ಡೆಯ ಹಾಗೆ ಕರಗುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು.

### ಧನು ರಾಶಿ

ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ನಿಮ್ಮ ಪ್ರೀತಿಪಾತ್ರರಿಂದ ಕರೆ ಪಡೆಯುತ್ತೀರಿ ಹಾಗೂ ಇದು ನಿಮಗೆ ರೋಮಾಂಚಕ ದಿನವಾಗಿರುತ್ತದೆ. ನಿಮ್ಮ ವೃತ್ತಿ ಅವಕಾಶಗಳನ್ನು ಹೆಚ್ಚಿಸಲು ನಿಮ್ಮ ವೃತ್ತಿಪರ ಶಕ್ತಿಯನ್ನು ಬಳಸಿ.

### ಮಕರ ರಾಶಿ

ಒತ್ತಡ ತೊಡೆದುಹಾಕಲು ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ನೀವು ಮಗುವಿನ ಗುಣಪಡಿಸುವ ಶಕ್ತಿಯನ್ನು ಅನುಭವಿಸುತ್ತೀರಿ. ಅವರು ಭೂಮಿಯ ಮೇಲೆ ಅತ್ಯಂತ ಶಕ್ತಿಯುತ ಆಧ್ಯಾತ್ಮಿಕ ಮತ್ತು ಭಾವನಾತ್ಮಕ ವ್ಯಕ್ತಿತ್ವವಾಗಿರುತ್ತಾರೆ. ನೀವೇ ಮರುಚೈತನ್ಯ ಹೊಂದುತ್ತೀರಿ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಅಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ.

### ಕುಂಭ ರಾಶಿ

ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಸ್ನೇಹಿತರು ಮತ್ತು ಸಂಬಂಧಿಗಳು ಹೆಚ್ಚು ಸಮಯ ಕೇಳಿದರೂ ಈ ಜಗತ್ತಿನ ಬಾಗಿಲುಗಳನ್ನು ಮುಚ್ಚಿ ನಿಮಗೆ ನೀವೇ ಒಳ್ಳೆಯ ವೈಭೋಗ ನೀಡಿಕೊಳ್ಳುವುದೊಳ್ಳೆಯದು.

### ಮೀನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.ನೀವು ಗುಂಪಿನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ನೀವು ಹೊಸ ಸ್ನೇಹಿತರನ್ನು ಸಂಪಾದಿಸುತ್ತೀರಿ.

# ಜಿಲ್ಲೆ ಬೆಳವಾಡಿ ಗ್ರಾಮದ ಖ್ಯಾತ ಹೋಮಿಯೋಪತಿ ತಜ್ಞ ನಾಡೋಜ ಡಾ. ಬಿ.ಟಿ.ರುದ್ರೇಶ್



**ಚಿಕ್ಕಮಗಳೂರು :** ಜಿಲ್ಲೆ ಬೆಳವಾಡಿ ಗ್ರಾಮದಖ್ಯಾತ ಹೋಮಿಯೋಪತಿತಜ್ಞ ನಾಡೋಜಡಾ.ಬಿ.ಟಿ.ರುದ್ರೇಶ್ ಹಾಗೂ ಕ್ರಿಕೆಟ್‌ಕ್ರೀಡಾಪಟು ವೇದಾಕೃಷ್ಣಮೂರ್ತಿಅವರಿಗೆ ಬೆಂಗಳೂರು ಕ್ಲಸ್ಟರ್ ಮಹಿಳಾ ವಿಶ್ವವಿದ ್ಯಾಲಯದಿಂದ ಇತ್ತೀಚೆಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು.ರಾಜ್ಯಪಾಲ ಥಾವರ್‌ಚಂದ್‌ಗೆಹ್ಲೋಟ್. ಉನ್ನತ ಶಿಕ್ಷಣ ಸಚಿವಡಾ. ಸುಧಾಕರ್. ಉಪಕುಲಪತಿಡಾ. ಮಂಜುನಾಥ. ವಿಶ್ರಾಂತ ಕುಲಪತಿಸಬಿಹಾ ಭೂಮಿಗೌಡ ಮೊದಲಾದವರು ಉಪಸ್ಥಿತರಿದ್ದರು.

# ಶುಲ್ಕ ರಹಿತ ರಹದಾರಿ ಪಡೆಯಲು ಸೂಚನೆ

**ಹಾಸನ :** ಕರ್ನಾಟಕ ಸರ್ಕಾರ, ಸಾರಿಗೆ ಇಲಾಖೆ ಸಚಿವಾಲಯವು ದಿನಾಂಕ 20.01.2022 ರ ತನ್ನ ಅಧಿಸೂಚನೆ ಸಂಖ್ಯೆ ಟಿಡಿ 2 ಟಿಡಿಓ –2019ರಲ್ಲಿ ಹೊಸದಾಗಿ ನೋಂದಣಿಯಾಗುವ ಮತ್ತು ಈಗಾಗಲೆ ನೋಂದಣಿಯಗಿರುವ ಬ್ಯಾಟರಿ ಚಾಲಿತ. ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಸಂಚರಿಸುತ್ತಿರುವ ಸಾರಿಗೆ ವಾಹನಗಳಿಗೆ ಮೋಟಾರು ವಾಹನ ಕಾಯ್ದೆ 1988 ರ ಕಲಂ 66(1)ರ ರ ಅಡಿಯಲ್ಲಿ ರಹದಾರಿ ಪಡೆಯುವುದರಿಂದ ವಿನಾಯತಿ ನೀಡಲಾಗಿತ್ತು.

ಮುಂದುವರೆದು ಸಚಿವಾಲಯವು ದಿನಾಂಕ01–07–2015ರ ಅಧಿಸೂಚನೆ ಸಂಖ್ಯೆ: ಟಿಡಿ 3 ಟಿಡಿಓ –2019 ರಲ್ಲಿ ಈಗಾಗಲೆ ಮೇಲೆ ತಿಳಿಸಿದ ಇಂಧನ ಮಾದರಿ ಸಾರಿಗೆ ವಾಹನಗಳಿಗೆ ರಹದಾರಿ ಪಡೆಯಲು ನೀಡಲಾಗಿದ್ದ ವಿನಾಯಿತಿಯನ್ನು ಹಿಂಪಡೆಯಲಾಗಿರುತ್ತದೆ.

ಆದುದರಿಂದ ಹಾಸನ ಜಿಲ್ಲೆಯ ಅರಕಲಗೂಡು, ಹೊಳೆನರಸೀಪುರ, ಚನ್ನರಾಯಪಟ್ಟಣ, ಅರಸೀಕೆರೆ ಮತ್ತು ಹಾಸನ ತಾಲ್ಲೂಕುಗಳ ಮತ್ತು ಹೋಬಳಿ ವ್ಯಾಪ್ತಿಯಲ್ಲಿ ಹೊಸದಾಗಿ ಖರೀದಿಸಿರುವ ಬ್ಯಾಟರಿ ಚಾಲಿತ ಆಟೋರಿಕ್ಷಾ ಕ್ಯಾಬ್ ಗಳ ಮಾಲೀಕರು ಪ್ರಾದೇಶಿಕ ಸಾರಿಗೆ ಕಚೇರಿ ಹಾಸನಕ್ಕೆ ಸೂಕ್ತ ದಾಖಲಾತಿಗಳನ್ನು ಸಲ್ಲಿಸಿ ಶುಲ್ಕ ರಹಿತವಾಗಿ ರಹದಾರಿ

ಪಡೆಯಲು ತಿಳಿಸಿದೆ.ಆದುದರಿಂದ ಹಾಸನ ಜಿಲ್ಲೆಯ ಅರಕಲಗೂಡು, ಹೊಳೆನರಸೀಪುರ, ಚನ್ನರಾಯಪಟ್ಟಣ, ಅರಸೀಕೆರೆ ಮತ್ತು ಹಾಸನ ತಾಲ್ಲೂಕುಗಳ ಮತ್ತು ಹೋಬಳಿ ವ್ಯಾಪ್ತಿಯಲ್ಲಿ ಹೊಸದಾಗಿ ಖರೀದಿಸಿರುವ ಬ್ಯಾಟರಿ ಚಾಲಿತ ಆಟೋರಿಕ್ಷಾ

ಕ್ಯಾಬ್ ಗಳ ಮಾಲೀಕರು ಪ್ರಾದೇಶಿಕ ಸಾರಿಗೆ ಕಚೇರಿ ಹಾಸನಕ್ಕೆ ಸೂಕ್ತ ದಾಖಲಾತಿಗಳನ್ನು ಸಲ್ಲಿಸಿ ಶುಲ್ಕ ರಹಿತವಾಗಿ ರಹದಾರಿ ಪಡೆಯಲು ತಿಳಿಸಿದೆ. ಹಾಸನ ನಗರ ವ್ಯಾಪ್ತಿಯಲ್ಲಿ ನೊಂದಣಿಗೊಂಡಿರುವ ಬ್ಯಾಟರಿ ಚಾಲಿತ

ಆಟೋರಿಕ್ಷಾಗಳ ಮಾಲೀಕರು ರಹದಾರಿ ಪಡೆಯುವ ಬಗ್ಗೆ ಪ್ರಾಧಿಕಾರದಿಂದ ಮುಂದಿನ ಆದೇಶ ಹೊರಡಿಸುವವರೆಗೂ ಕಾರ್ಯಚರಣೆ ಸ್ಥಗಿತಗೊಳಿಸುವಂತೆ ತಿಳಿಸಿದೆ.ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತಿಳಿಸಿದ್ದಾರೆ.

# ಆರೋಗ್ಯ ಇಲಾಖೆಯ ಸಲಹೆಗಳನ್ನು ತಪ್ಪದೆ ಪಾಲಿಸಬೇಕು – ವಿ.ಹನುಮಂತಪ್ಪ

**ಚಿಕ್ಕಮಗಳೂರು:** ಗರ್ಭಿಣಿಯರು, ಬಾಣಂತಿಯರು ಪೌಷ್ಠಿಕ ಆಹಾರದ ಕೊರತೆಯಿಂದ ರಕ್ತಹೀನತೆ, ಅಪೌಷ್ಠಿಕತೆಯಿಂದ ಬಳಲದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡು ಆರೋಗ್ಯ ಇಲಾಖೆಯ ಸಲಹೆಗಳನ್ನು ತಪ್ಪದೆ ಪಾಲಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಕರೆನೀಡಿದರು.

ಅವರು ರಾಮನಹಳ್ಳಿ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಪ್ರಚಾರ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ, ನಗರಸಭೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಪೋಷಣ್ ಅಭಿಯಾನ ಯೋಜನೆ ಅಡಿ "ರಾಷ್ಟ್ರೀಯ ಪೋಷಣ್ ಮಾಸಾಚರಣೆ ಕಾರ್ಯಕ್ರಮ–2025" ನ್ನು ಉದ್ಘಾಟಿಸಿ ಮಾತನಾಡಿದರು.

ಸಮಯದ ಜೊತೆ ನಡೆಯುವ ಅವಶ್ಯಕತೆ ಇಲ್ಲ, ಸತ್ಯದ ಜೊತೆ ನಡೆಯಿರಿ ಆಗ ಒಂದು ದಿನ ಸಮಯವೇ ನಿಮ್ಮ ಜೊತೆ ನಡೆಯುತ್ತದೆ. ಇದನ್ನರಿತು ಎಲ್ಲರೂ ಕರ್ತವ್ಯ ನಿರ್ವಹಿಸುವ ಅಗತ್ಯ ಇದೆ ಎಂದರು.



ಗರ್ಭಿಣಿಯರು, ಬಾಣಂತಿಯರಲ್ಲಿ ಅಪೌಷ್ಠಿಕತೆ, ರಕ್ತಹೀನತೆಯಿಂದಾಗಿ ಬಳಲದಂತೆ ಸದಾ ನಿಗಾವಹಿಸಬೇಕು ಜೊತೆಗೆ ಇಲಾಖೆಯಿಂದ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡಾಗ ಎರಡು ಜೀವಗಳು ಅನಾರೋಗ್ಯಕ್ಕೆ ತುತ್ತಾಗುವುದನ್ನು ತಡೆಯಬಹುದಾಗಿದೆ ಎಂದರು.

ಹದಿಹರಿಯದ ಹೆಣ್ಣುಮಕ್ಕಳು, ಗರ್ಭಿಣಿಯರು, ಹಾಲುಣಿಸುವ ತಾಯಂದಿರು, 0–6 ವರ್ಷದ ಮಕ್ಕಳ ಪೌಷ್ಠಿಕಾಂಶದ ಕಡೆಗೆ ಹೆಚ್ಚಿನ ಆದ್ಯ ಗಮನ ನೀಡಬೇಕು, ಇದನ್ನು ಗಂಭೀರವಾಗಿ ಪರಿಗಣಿಸಿದರೆ ಕಡಿಮೆ ತೂಕದ ಶಿಶು ಜನನ ಕಡಿಮೆ ಮಾಡಬೇಕೆಂಬುದು ಈ ಅಭಿಯಾನದ ಉದ್ದೇಶ ಎಂದು ಹೇಳಿದರು.ಮಹಿಳೆಯರು ತರಕಾರಿ, ಸೊಪ್ಪು, ಹಣ್ಣುಗಳನ್ನು ಕೇವಲ ಪ್ರದರ್ಶನಕ್ಕೆ ಮಾತ್ರ ಮೀಸಲಿಡದೆ ಸೇವಿಸುವ ಮೂಲಕ ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನಹರಿಸಬೇಕೆಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಂಗನಾಥ್ ಮಾತನಾಡಿ, ಪೋಷಣ್ ಅಭಿಯಾನದ ಅಂಗವಾಗಿ ಪ್ರತೀ ವರ್ಷ ಸೆಪ್ಟೆಂಬರ್ ಮಾಹೆಯಲ್ಲಿ ರಾಷ್ಟ್ರೀಯ ಪೋಷಣ್ ಮಾಸಾಚರಣೆ ನಡೆಸಲಾಗುತ್ತದೆ. ಇದರಲ್ಲಿ ಮಕ್ಕಳು ಹದಿಹರೆಯದ ಯುವತಿಯರು, ಗರ್ಭಿಣಿಯರು ಹಾಲುಣಿಸುವ ತಾಯಂದಿರಲ್ಲಿ ಅಪೌಷ್ಠಿಕತೆ ತಡೆಗಟ್ಟುವ ಜೊತೆಗೆ ಪೌಷ್ಠಿಕಾಂಶವುಳ್ಳ ಆಹಾರದ ಮಹತ್ವ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಪೌಷ್ಠಿಕಾಂಶದ ಮಟ್ಟವನ್ನು ವೃದ್ಧಿಪಡಿಸಲು ಮಾತೃಪೂರ್ಣ ಹಾಗೂ ಕ್ಷೀರಭಾಗ್ಯ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆ. ಖನಿಜಾಂಶ ಹೊಂದಿರುವ ಸೊಪ್ಪು, ತರಕಾರಿ ಜೊತೆಗೆ ಮೊಳಕೆ ಕಾಳುಗಳನ್ನು ಉಪಯೋಗಿಸುವ ಮೂಲಕ ಉತ್ತಮ ಆರೋಗ್ಯ ಹೊಂದಬೇಕು,

ತಾಯಿ ಆರೋಗ್ಯವಾಗಿದ್ದರೆ ಆರೋಗ್ಯವಂತ ಮಗು ಜನಿಸಲು ಸಾಧ್ಯ ಎಂದು ತಿಳಿಸಿದರು.ವೇದಿಕೆಯಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೂಪಕುಮಾರಿ, ನಗರಸಭೆ ಸದಸ್ಯ ಲಕ್ಷ್ಮಣ್, ಸಂಪನ್ಮೂಲ ವ್ಯಕ್ತಿಗಳಾಗಿ ಆರೋಗ್ಯ ಇಲಾಖೆಯ ಶಿಕ್ಷಣಾಧಿಕಾರಿ ಜಲಜಾಕ್ಷಿ, ಅಂಗನವಾಡಿ ಕಾರ್ಯಕರ್ತೆಯರಾದ ಪುಷ್ಪ, ಶೋಭಾ, ಲಕ್ಷ್ಮಿ, ಆಶಾ, ಭಾಗ್ಯ, ಸುಮ, ವೀಣಾ, ವೇದ, ಲತಾ, ಚಂದ್ರಕಲಾ, ಪ್ರೇಮ, ಪ್ರಮೀಳ, ಜಯಮ್ಮ, ಸತ್ಯ, ಶಾಜಿಯಾ ಉಪಸ್ಥಿತರಿದ್ದರು.ಮೊದಲಿಗೆ ಭಾಗ್ಯಲಕ್ಷ್ಮಿ ಪ್ರಾರ್ಥಿಸಿ, ಮೇಲ್ವಿಚಾರಕಿ ಪುಷ್ಪ ನಿರೂಪಿಸಿದರು. ಅಂಗನವಾಡಿ ಕಾರ್ಯಕರ್ತೆಯರಾದ ಅನುಸೂಯ ಸ್ವಾಗತಿಸಿ, ಕೊನೆಯಲ್ಲಿ ಕೋಮಲಾಕ್ಷಿ ವಂದಿಸಿದರು.

# ದಸರಾ ಹಬ್ಬದಲ್ಲಿ ಸಂವಿಧಾನ ಬಾಹಿರ ಘೋಷಣೆ ಆರೋಪ; ಕ್ರಮಕ್ಕೆ ಎಸ್ಪಿಗೆ ಮನವಿ



**ದಾವಣಗೆರೆ:** ದಸರಾ ಹಬ್ಬದ ಪ್ರಯುಕ್ತ ನಡೆಸಿದ ಬೈಕ್ ರ್ಯಾಲಿಯಲ್ಲಿ ಸಂವಿಧಾನ ಬಾಹಿರ ಘೋಷಣೆ ಕೂಗಲಾಗಿದ್ದು, ಕೂಡಲೇ ಕ್ರಮ ವಹಿಸಬೇಕೆಂದು ಆಗ್ರಹಿಸಿ ಜಿಲ್ಲಾ ಪೊಲೀಸ್ ಅಧಿಕಾರಿ ಉಮಾ ಪ್ರಶಾಂತ್ ಅವರಿಗೆ ಮುಸ್ಲಿಂ ಒಕ್ಕೂಟ ಮನವಿ ಸಲ್ಲಿಸಿದೆ.

ಇದೇ ವೇಳೆ ಒಕ್ಕೂಟದ ಸಂಚಾಲಕ ಟಿ. ಅಸ್ಗರ್ ಮಾತನಾಡಿ, ನಮ್ಮ ದೇಶದ ಸಂವಿಧಾನ ಪ್ರತಿಯೊಬ್ಬ ಪ್ರಜೆ ಮತ್ತು ಜಾತಿ, ಪಂಗಡ, ಧರ್ಮದರಿಗೆ ಸರಿಸಮಾನವಾಗಿ ಹಕ್ಕು ನೀಡಿದೆ. ಆದ್ದರಿಂದ ಇವರು ಕೂಗಿರುವ ಘೋಷಣೆ ಸಂವಿಧಾನ ವಿರೋಧಿಯಾಗಿದೆ ಎಂದು ಆರೋಪಿಸಿದರು.

ಶ್ರೀ ದುರ್ಗಾಂಬಿಕಾ ದೇವಸ್ಥಾನದ ಮುಂದೆ ದುರ್ಗ ದೌಡ್ ಹೆಸರಿನಲ್ಲಿ ನಡೆದ ಮೆರವಣಿಗೆಯಲ್ಲೂ ಹರಿತವಾದ ಶಸ್ತ್ರಾಸ್ತ್ರಗಳನ್ನು ಕೈಯಲ್ಲಿ ಹಿಡಿದುಕೊಂಡು ಸರ್ವಜನಿಕವಾಗಿ ಪ್ರದರ್ಶನ ಮಾಡಿ

ಮೆರವಣಿಗೆ ಮಾಡಿದ್ದು, ಇದನ್ನು ವಿಡಿಯೋ ಮಾಡಿ ರಕ್ತ ಚರಿತ್ರೆ ಎಂಬ ಹಾಡು ಸಂಯೋಜಿಸಿ, ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಸರ್ವಜನಿಕರಿಗೆ ಭಯ ಉಂಟು ಮಾಡಲಾಗಿದೆ. ಇವೆರಡು ವಿಷಗಳನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲಾ ಪೊಲೀಸ್ ಇಲಾಖೆ ಅಂಥವರ ವಿರುದ್ಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಇಬ್ರಾಹಿಂ, ಖಲೀಲವುಲ್ಲಾ, ಮಹಮ್ಮದ್ ಅಲಿ, ಶೋಯೇಬ್, ಸಾಜಿದ್ ಅಹ್ಮದ್, ಜಬೀವುಲ್ಲಾ, ಆದಿಲ್ ಖಾನ್, ಇಲು, ದಾದಪೀರ್. ಇಮ್ರಾನ್, ರಫೀಕ್ ತಮನ್ನ, ಬಾಷ, ಅಜ್ಮತ್, ಖಾಜಾ, ಸಾಧಿಕ್, ಸಿದ್ದೀಕ್ ಇತರರು ಇದ್ದರು.

# ಶರಾವತಿ ಯೋಜನೆ: 3000 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್

**ಚಿಕ್ಕಮಗಳೂರು:** ಶರಾವತಿ ಯೋಜನೆಯಲ್ಲಿ ಪ್ರಸ್ತುತ ಉತ್ಪಾದನೆಯಾಗುತ್ತಿರುವ 1000 ಮೆಗಾವ್ಯಾಟ್ ವಿದ್ಯುತ್ ಅಲ್ಲದೆ, ಹೆಚ್ಚುವರಿಯಾಗಿ 2000 ಮೆಗಾವ್ಯಾಟ್ ಸೇರಿ ಒಟ್ಟು 3000 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಅವಕಾಶ ಮಾಡಿಕೊಳ್ಳಲಾಗಿದೆ ಎಂದು ರಾಜ್ಯ ಇಂಧನ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ತರೀಕೆರೆ ತಾಲ್ಲೂಕು ಲಕ್ಕವಳ್ಳಿ ಗ್ರಾಮದಲ್ಲಿ ಇಂದು 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ವಿದ್ಯುತ್ ಬೇಡಿಕೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳ ಸಲಹೆಯ ಮೇರೆಗೆ ವಿದ್ಯುತ್ ಅನ್ನು ಪಂಪ್ ಸ್ಟೋರೇಜ್ ಮಾಡಲು ಅವಕಾಶ ಕಲ್ಪಿಸಿಕೊಳ್ಳಬಹುದಾಗಿದೆ. ಈ ವ್ಯವಸ್ಥೆಯಲ್ಲಿ ಶರಾವತಿ ಮತ್ತು ವಾರಾಹಿ ಯೋಜನೆಗಳಲ್ಲಿ ವಿದ್ಯುತ್ ಉತ್ಪಾದನೆಗೆ ಬಳಕೆಯಾದ ನೀರನ್ನು ಮರು ಬಳಕೆ ಮಾಡುವ ತಂತ್ರಜ್ಞಾನವನ್ನು ಉಪಯೋಗಿಸಲಾಗುತ್ತಿದೆ ಎಂದು ಹೇಳಿದರು.

ಪ್ರಸ್ತುತ ರೂಪಿಸಲಾಗಿರುವ ಯೋಜನೆಯಲ್ಲಿ ನದಿಯಲ್ಲಿ ನೀರಿರುವುದಿಲ್ಲ. ಅರಣ್ಯ ಪ್ರದೇಶವೆಲ್ಲ ಮುಳುಗಡೆಯಾಗುತ್ತದೆ ಎಂದು ಅಪಪ್ರಚಾರ ಮಾಡಲಾಗುತ್ತಿದೆ. ಆದರೆ ಯಾವುದೇ ಅರಣ್ಯ ಪ್ರದೇಶ ಈ ಯೋಜನೆಯಲ್ಲಿ ಮುಳುಗಡೆಯಾಗುವುದಿಲ್ಲ. ಪಂಪ್ ಸ್ಟೇಷನ್‌ಗಾಗಿ 120 ಎಕರೆ ಪ್ರದೇಶದಲ್ಲಿ ಪೈಪ್‌ಲೈನ್ ಅಳವಡಿಸುವ ಕಾರ್ಯವನ್ನು ಮಾತ್ರ ನಿರ್ವಹಿಸಲಾಗುತ್ತದೆ. ಅನಂತರ ಅದನ್ನು ಮುಚ್ಚಲಾಗುತ್ತದೆ. ಪರಿಸರ ಸ್ನೇಹಿಯಾಗಿ ರೂಪಿಸುವ ಈ ಯೋಜನೆ ಕಾರ್ಯಗತಕ್ಕೆ ನಾಲ್ಕು ವರ್ಷಗಳ ಕಾಲಾವಕಾಶ ಬೇಕಾಗುತ್ತದೆ ಎಂದರು.

ರಾಜ್ಯದಲ್ಲಿ ವಿದ್ಯುತ್ ಕೊರತೆ ಇಲ್ಲ. ಸಾಕಷ್ಟು ವಿದ್ಯುತ್ ಶೇಖರಣೆ ಮಾಡಲಾಗಿದೆ. ಹೀಗಿದ್ದರೂ ಸಹ ತಮ್ಮ ಸರ್ಕಾರ ವಿದ್ಯುತ್ ಉತ್ಪಾದನೆಯ ಜೊತೆಗೆ ನೆರೆ ರಾಜ್ಯಗಳಿಂದ ಖರೀದಿಸುವ ಮೂಲಕ ಸಾಕಷ್ಟು ವಿದ್ಯುತ್ ಸಂಗ್ರಹಣೆ ಮಾಡಿಕೊಳ್ಳಲಾಗಿದೆ. ಏಷ್ಯಾದಲ್ಲಿಯೇ ದೊಡ್ಡದಾದ ಪಾವಗಡದ ರೈತರ ಸಹಭಾಗಿತ್ವದ ಸೋಲಾರ್ ಪಾರ್ಕ್‌ನಲ್ಲಿ 2000 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಅವಕಾಶವಾಗಿದೆ. ಇಲ್ಲಿ 10 ಸಾವಿರ ಎಕರೆ ಪ್ರದೇಶವನ್ನು ಈ ಯೋಜನೆಗೆ ಬಳಸಿಕೊಳ್ಳಲಾಗಿದೆ ಎಂದು ತಿಳಿಸಿದ ಅವರು, ಇನ್ನೂ ರೈತರು ವಿದ್ಯುತ್ ಉತ್ಪಾದನೆಗೆ ಭೂಮಿ ನೀಡಲು ಮುಂದೆ ಬಂದಿದ್ದಾರೆ ಎಂದು ತಿಳಿಸಿದರು.

ನೆನೆಗುದಿಗೆ ಬಿದ್ದಿದ್ದ ಕುಸುಮ್–ಸಿ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಒಂದು ವರ್ಷದೊಳಗೆ 2500 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಕಾರ್ಯಕ್ಕೆ ಟೆಂಡರ್ ಕರೆಯಲಾಗಿದೆ. ಯೋಜನೆ ಕಾರ್ಯಗತವಾದಲ್ಲಿ ಮುಂದಿನ ಬೇಸಿಗೆಗೆ ವಿದ್ಯುತ್ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆಹರಿಸಲು ಸಾಧ್ಯವಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಹೊಸದಾಗಿ 100 ಉಪಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಗತ್ಯವಿರುವ ಕಡೆ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ವಹಿಸಲಾಗುವುದು. ಇದರಿಂದ ವಿದ್ಯುತ್ ಕೊರತೆ ನೀಗುತ್ತದೆ ಎಂದರು.

ಕೋವಿಡ್ ಬಂದ ಮೇಲೆ ಜನರ ಆದಾಯ ಕಡಿಮೆಯಾಗಿದ್ದು, ಈ ಹಂತದಲ್ಲಿ ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳಿಂದ ಜನರಿಗೆ ತುಂಬಾ ಅನುಕೂಲವಾಗಿದೆ. ಇದರಿಂದಾಗಿ ಕುಟುಂಬಕ್ಕೆ ಪ್ರತೀ ತಿಂಗಳು ಕನಿಷ್ಠ 5 ಸಾವಿರ ರೂ.ಗಳಷ್ಟು ಪ್ರಯೋಜನವಾಗುತ್ತಿದೆ ಎಂದು ತಿಳಿಸಿದರು.

ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್, ಶಾಸಕರಾದ ಜಿ.ಹೆಚ್.ಶ್ರೀನಿವಾಸ್, ಮಾಜಿ ಸಂಸದ ಬಿ.ಎನ್. ಚಂದ್ರಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಅಬ್ದುಲ್ ರೆಹಮಾನ್, ಉಪಾಧ್ಯಕ್ಷರಾದ ಜಿ.ಭವಾನಿ, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್. ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥಬಾಬು, ಸಹ ನಿರ್ದೇಶಕರಾದ ಆರೋಗ್ಯ ಇಲಾಖೆಯ ಸಹ ಜಿಲ್ಲಾ ನೋಡಲ್ ಅಧಿಕಾರಿ ಡಾ.ಚಂದ್ರಿಕಾ, ಭಾಗವಹಿಸಿದ್ದರು.

# ಅವಧಿ ವಿಸ್ತರಣೆ

**ಹಾಸನ :** ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ವಿದ್ಯಾರ್ಥಿಗಳಿಂದ 2025–26 ನೇ ಶೈಕ್ಷಣಿಕ ಸಾಲಿಗೆ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆ ಹಾಗೂ ಇತರೆ ಈ ಕೆಳಕಂಡ ಪ್ರೋತ್ಸಾಹಧನ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು 30–11–2025 ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ ಯೋಜನೆಗಳು:ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ( 1ರಿಂದ 8), ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆ, ಬಿ.ಎಸ್ಸಿ ನರ್ಸಿಂಗ್ ಮತ್ತು ಜಿ.ಎನ್.ಎಂ. ನರ್ಸಿಂಗ್ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ಯೋಜನೆ, IIT, IIIT, IIM, NIT, IISER, AIIMS, NLU, INI & IuSLAಮುಂತಾದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ.ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ (ಪಿಜಿ) ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿದೇಶಿ ವಿದ್ಯಾರ್ಥಿವೇತನ.ಪಿ.ಹೆಚ್.ಡಿ ಸಂಶೋಧನೆ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಸಂಶೋಧನಾರ್ಥಿಗಳಿಗೆ ಎ.ಖ.ಈಮಾದರಿಯಲ್ಲಿ ಫೆಲೋಶಿಪ್ ಯೋಜನೆ. ಮೆಟ್ರಿಕ್ ಪೂರ್ವ/ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿಯನ್ನು ಖಖಕ ಪೋರ್ಟಲ್ https://ssp.postmatric.karnataka.gov.in/ ಹಾಗೂ ಇತರೆ ಪ್ರೋತ್ಸಾಹಧನ ಯೋಜನೆಗಳಿಗೆ https://sevasindhu.karnataka.gov.in/ಅಡಿಯಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸುವುದು. ಅರ್ಜಿ ಸಲ್ಲಿಸಲು 30–11–2025 ಕೊನೆಯ ದಿನಾಂಕವಾಗಿರುತ್ತದೆ.

# ನಿಧನ ಸುದ್ದಿಗಳು

### ಗೀತಾ ಮಾಗಾನಹಳ್ಳಿ ನಿಧನ

**ದಾವಣಗೆರೆ:** 4ನೇ ಮುಖ್ಯರಸ್ತೆ, ಬನ್ನಿ ಮಹಾಂಕಾಳಿ ದೇವಸ್ಥಾನ ಹತ್ತಿರದ ನಿವಾಸಿ ಮಾಗಾನಹಳ್ಳಿ ಜಯರಾಜ್ ಇವರ ಧರ್ಮಪತ್ನಿ ಇವರು ದಿನಾಂಕ 06.010.20250 ಸೋಮವಾರ ಸಂಜೆ 5ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 42 ವರ್ಷ ವಯಸ್ಸಾಗಿತ್ತು. ಪತಿ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು – ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 07.10.2025ರ ಮಂಗಳವಾರ ಬೆಳಗ್ಗೆ 12 ಗಂಟೆಗೆ ದಾವಣಗೆರೆ ಬೂದಾಳ್ ರಸ್ತೆಯ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

### ಕಗತ್ತೂರ ಬಸಮ್ಮ ನಿಧನ

**ಸಾಸ್ವೆಹಳ್ಳಿ:** ಹೊನ್ನಾಳಿ ತಾಲೂಕು ಭೈರನಹಳ್ಳಿ ಗ್ರಾಮದ 'ಕಗತ್ತೂರ ಬಸಮ್ಮ (65) ಭಾನುವಾರ ಬೆಳಗ್ಗೆ ನಿಧನರಾದರು. ಮೃತರಿಗೆ ಪತಿ, ಮೂವರು ಪುತ್ರರಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಅವರ ತೋಟದಲ್ಲಿ ನಡೆಯಿತು ಎಂದು ಕುಟುಂಬದವರು ತಿಳಿಸಿದ್ದಾರೆ.

### ಗೌಡ್ರು ಶಾಂತಮ್ಮ ನಿಧನ

**ದಾವಣಗೆರೆ:** ತಾಲ್ಲೂಕು ಎಲೆಬೇತೂರು ಗ್ರಾಮದ ದಿವಂಗತ ಗೌಡ್ರು ರಾಜಶೇಖರಪ್ಪನವರ ಧರ್ಮಪತ್ನಿ ಶ್ರೀಮತಿ ಗೌಡ್ರು ಶಾಂತಮ್ಮ ಇವರು ದಿನಾಂಕ 6.10.2025ನೇ ಸೋಮವಾರ ಬೆಳಗ್ಗೆ 9:45ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.
ಮೃತರಿಗೆ 78 ವರ್ಷ ವಯಸ್ಸಾಗಿತ್ತು. ಓರ್ವ ಪುತ್ರ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 06.10.2025ನೇ ಸೋಮವಾರ ಸಂಜೆ 5 ಗಂಟೆಗೆ ಎಲೆಬೇತೂರು ಗ್ರಾಮದ ಮೃತರ ತೋಟದಲ್ಲಿ ನೆರವೇರಿಸಲಾಯಿತು.

# ಸಮೀಕ್ಷೆ ಸಂಬಂಧ ಸಹಾಯವಾಣಿ ಆರಂಭ

**ಚಿಕ್ಕಮಗಳೂರು:** 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸುತ್ತಿರುವ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಚಿಕ್ಕಮಗಳೂರು ತಾಲ್ಲೂಕಿನ ಗ್ರಾಮೀಣ ಪ್ರದೇಶದಲ್ಲಿ ಹಾಗೂ ನಗರದ 35 ವಾರ್ಡ್‌ಗಳಲ್ಲಿ ನಡೆಸಲು ಅನುಕೂಲವಾಗುವಂತೆ ಸಹಾಯವಾಣಿ ಸಂಖ್ಯೆಗಳನ್ನು ಆರಂಭಿಸಲಾಗಿದೆ.

ಸಮೀಕ್ಷೆಗಾಗಿ ಪ್ರತಿ ಮನೆ ಮನೆಗೆ ಗಣತಿದಾರರು ಭೇಟಿ ನೀಡಿ ಗಣತಿ ಮಾಡುವ ಜೊತೆಗೆ ಗ್ರಾಮ ಪಂಚಾಯಿತಿಯ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಲ್ಲಿ ಹಾಗೂ ನಗರದ 35 ವಾರ್ಡ್ ಗಳಲ್ಲಿ ಶಿಬಿರದ ಮೂಲಕ ಕೈಗೊಂಡಿರುವ (ಮನೆ ಮನೆ ಭೇಟಿ ಸಂದರ್ಭದಲ್ಲಿ ಬಿಟ್ಟು ಹೋದ ಕುಟುಂಬಗಳು) ಸಮೀಕ್ಷೆಯಲ್ಲಿ ಭಾಗವಹಿಸಲು ಇದರಿಂದ ಅನುಕೂಲವಾಗಲಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಹಾಯವಾಣಿ ಸಂಖ್ಯೆ: ಟೋಲ್ ಫ್ರೀ ಸಂಖ್ಯೆ: 18004252281 ಹಾಗೂ ಕಚೇರಿ ದೂರವಾಣಿ ಸಂಖ್ಯೆ 08262-34017 ಹಾಗೂ ನಗರ ವ್ಯಾಪ್ತಿಗೆ ಸಹಾಯವಾಣಿ ಸಂಖ್ಯೆ: 08262-233136 ಆಗಿದೆ ಎಂದು ತಾಲ್ಲೂಕು ತಹಸೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ

**ಚಿಕ್ಕಮಗಳೂರು:** ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಮತ್ತು ಕೈಗಾರಿಕಾ ಸ್ಪಂದನ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಕ್ಟೋಬರ್ 8 ರಂದು ಮಧ್ಯಾಹ್ನ 3 ಗಂಟೆಗೆ ಆಯೋಜಿಸಲಾಗಿದೆ. ಈ ಸಂಬಂಧ ಮನವಿ, ಅಹವಾಲುಗಳು ಇದ್ದಲ್ಲಿ ಜಿಲ್ಲೆಯ ಕೈಗಾರಿಕೋದ್ಯಮಿಗಳು ಅಂದು ಮಧ್ಯಾಹ್ನ 12 ಗಂಟೆಯೊಳಗೆ ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಕಚೇರಿಗೆ ಲಿಖಿತ ರೂಪದಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕೈಗಾರಿಕಾ ಕೇಂದ್ರವನ್ನು (ದೂರವಾಣಿ ಸಂಖ್ಯೆ: 08262-295821) ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ತರಬೇತಿ

**ಚಿಕ್ಕಮಗಳೂರು:** ಗ್ರಾಮೀಣಾಭಿವೃದ್ಧಿ ಸಚಿವಾಲಯದ ಅಡಿಯಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಕುರಿತ 30 ದಿನಗಳ ಉಚಿತ ತರಬೇತಿಯು ಅಕ್ಟೋಬರ್ 29 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ತರಬೇತಿಯಲ್ಲಿ ಭಾಗವಹಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರುವ ಹಾಗೂ ಡಿಎಸ್‌ಎಲ್‌ಆರ್ ಕ್ಯಾಮೆರಾವನ್ನು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 924142581 ಅನ್ನು ಸಂಪರ್ಕಿಸಬಹುದು ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 10 ದಿನ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ

**ಚಿಕ್ಕಮಗಳೂರು:** ರಾಜ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಆಶ್ರಯದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗುವುದು. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಈ ಸಂಬಂಧ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು 18 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿದ್ದು, ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು.

ನಗರದ ಕೆ.ಎಂ.ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯಿಂದ
ಕಚೇರಿ ವೇಳೆಯಲ್ಲಿ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಅಕ್ಟೋಬರ್ 8 ರೊಳಗೆ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ (6364826966)ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ವಾಹನ ವಿಲೇವಾರಿ


**ಶಿವಮೊಗ್ಗ:** ಶಿವಮೊಗ್ಗ ತುಂಗಾನಗರ ಪೊಲೀಸ್ ಠಾಣೆಯಲ್ಲಿ ವಾರಸ್ಸುದಾರರು ಪತ್ತೆಯಾಗದ 45 ವಿವಿಧ ವಾಹನಗಳನ್ನು ಯಥಾ ಸ್ಥಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅ.13 ರಂದು ಬೆಳಿಗ್ಗೆ 09 ಗಂಟೆಗೆ ತುಂಗಾನಗರ ಪೊಲೀಸ್ ಠಾಣಾ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಹೆಚ್ಚಿನ ಮಾಹಿತಿಗೆ ತುಂಗಾನಗರ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮಾನ್ಯ ಸಭೆ

**ರಾಮನಗರ:** ಇಲ್ಲಿನ ನಗರಸಭೆಯ ಪ್ರಶಸ್ತಿ ಭವನದಲ್ಲಿ ಅ. 9ರ ಗುರುವಾರ ಬೆಳಿಗ್ಗೆ 11 ಗಂಟೆಗೆ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ) ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ಆಯೋಜಿಸಲಾಗಿದೆ ಎಂದು ರಾಮನಗರ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮ ಪಂಚಾಯತ ಮಟ್ಟದ ಅಹವಾಲು ಸ್ವೀಕಾರ, ಪರಿಹಾರ ಸಭೆ



ಗದಗ : ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ಎಲ್ಲ ಅರ್ಹ ಫಲಾನುಭವಿಗಳನ್ನು ಯೋಜನೆ ವ್ಯಾಪ್ತಿಗೆ ತರಲು ಗದಗ ತಾಲೂಕ ಮಟ್ಟದಲ್ಲಿ ಗ್ರಾಮ ಪಂಚಾಯತ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪಲಾನುಭವಿಗಳ ಮತ್ತು ಸಾರ್ವಜನಿಕ ಅಹವಾಲು ಸ್ವೀಕಾರ ಹಾಗೂ ಪರಿಹಾರ ಸಭೆ ಹಮ್ಮಿಕೊಳ್ಳಲಾಗಿದೆ.

ಗದಗ ತಾಲೂಕ ಪಂಚಾಯತ ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರ ನಿರ್ದೇಶನದ ಮೇರೆಗೆ ಈ ಕಾರ್ಯಕ್ರಮಗಳನ್ನು ವಿವಿಧ ಗ್ರಾಮ ಪಂಚಾಯತಗಳಲ್ಲಿ ಆಯೋಜಿಸಲಾಗುತ್ತಿದೆ.

ಕಾರ್ಯಕ್ರಮಗಳ ಉದ್ದೇಶ ಸರ್ಕಾರದ ಜನಪರ ಯೋಜನೆಗಳು ಗ್ರಾಮ ಮಟ್ಟದಲ್ಲಿ ತಲುಪುವಂತೆ ಮಾಡುವುದು ಹಾಗೂ ಯಾವುದೇ ಅರ್ಹ ಫಲಾನುಭವಿಯು ಯೋಜನೆಯಿಂದ ಹೊರಗೊಳ್ಳದಂತೆ ಖಚಿತಪಡಿಸುವುದಾಗಿದೆ.

ಕಾರ್ಯಕ್ರಮಗಳು ಕೆಳಗಿನ ಗ್ರಾಮ ಪಂಚಾಯತಗಳಲ್ಲಿ ನಿಗದಿಪಡಿಸಲಾದ ದಿನಾಂಕಗಳಂದು ನಡೆಯಲಿವೆ:

ಅಕ್ಟೋಬರ್ ರಂದು 09 ರಂದು ಯಲಿಶಿರೂರು ಗ್ರಾಮ ಪಂಚಾಯತ ಕಾರ್ಯಾಲಯ ಬೆಳಿಗ್ಗೆ 10.30 ಗಂಟೆಗೆ, ಹರ್ತಿ ಗ್ರಾಮ ಪಂಚಾಯತ ಕಾರ್ಯಾಲಯ ಮಧ್ಯಾಹ್ನ 3.00 ಗಂಟೆಗೆ.

ಅಕ್ಟೋಬರ್ ರಂದು 10 ರಂದು ನಾಗಾವಿ ಗ್ರಾಮ ಪಂಚಾಯತ ಕಾರ್ಯಾಲಯ ಬೆಳಿಗ್ಗೆ 10.30 ಗಂಟೆಗೆ, ಕಳಸಾಪೂರ ಗ್ರಾಮ ಪಂಚಾಯತ ಕಾರ್ಯಾಲಯ ಮಧ್ಯಾಹ್ನ 3.00 ಗಂಟೆಗೆ.

ಕಾರ್ಯಕ್ರಮಗಳಲ್ಲಿ ಪಂಚಾಯತದ ಜನಪ್ರತಿನಿಧಿಗಳು, ತಾಲೂಕ ಪಂಚಾಯತದ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾಗೂ ಸಂಬಂಧಪಟ್ಟ ಐದು ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಗೃಹಲಕ್ಷ್ಮೀ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ, ಯುವ ನಿಧಿ ಈ ಪಂಚ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಿದೆ. ಈ ಸಭೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳು ಹಾಜರಾಗಿ, ಯೋಜನೆಗಳ ಉಪಯೋಗ ಪಡೆಯಲು ತಾ ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೇಡವಾದ ನವಜಾತ ಶಿಶು ಕಂಡುಬಂದಲ್ಲಿ ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ಒಪ್ಪಿಸಿ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ

**ಬಳ್ಳಾರಿ:** ಬೇಡವಾದ ಮತ್ತು ಸಾರ್ವಜನಿಕ ಸ್ಥಳದಲ್ಲಿ ನವಜಾತ ಶಿಶು ಕಂಡುಬಂದಲ್ಲಿ ಅಂತಹ ಮಕ್ಕಳನ್ನು ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ಒಪ್ಪಿಸಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಯಾವುದೇ ಕಾರಣದಿಂದ ತಮಗೆ ಜನಿಸಿದ ನವಜಾತ ಶಿಶುಗಳು, ಅನಾಥ, ಪರಿತ್ಯಕ್ತ ಮಗುವು ತಮಗೆ ಬೇಡವಾದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡಿ ಮಾಹಿತಿ ನೀಡಿದರೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮಗುವನ್ನು ಸ್ವೀಕರಿಸಿ, ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ದಾಖಲು ಮಾಡುತ್ತಾರೆ.

ಇಲ್ಲವೇ ಬಳ್ಳಾರಿ ನಗರದ ಕಂಟೋನ್ ಮೆಂಟ್ ಪ್ರದೇಶದ ಶಾಂತಿಧಾಮ ಆವರಣದ ಸರ್ಕಾರಿ ವಿಶೇಷ ದತ್ತು ಸಂಸ್ಥೆ, ಇಲ್ಲಿಗೆ ಒಪ್ಪಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

ಈ ಪ್ರಕ್ರಿಯೆಯಲ್ಲಿ ನವಜಾತ ಮಗುವಿನ ತಾಯಿ/ಪೋಷಕರಿಗೆ ಯಾವುದೇ ವಿಚಾರಣೆಗೆ ಒಳಪಡಿಸಲಾಗುವುದಿಲ್ಲ. ಈ ಬಗ್ಗೆ ಸಾರ್ವಜನಿಕರು ಸಹ ಯಾವುದೇ ಭಯ ಆತಂಕವಿಲ್ಲದೇ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡಿ ಬೇಡವಾದ ಮಕ್ಕಳನ್ನು ಒಪ್ಪಿಸಬೇಕು.



ಸಾರ್ವಜನಿಕರು ಯಾವುದೇ ಕಾರಣಕ್ಕೂ ಮಕ್ಕಳನ್ನು ಕಸದ ಬುಟ್ಟಿಯಲ್ಲಿ, ರಸ್ತೆ ಬದಿಯಲ್ಲಿ, ತಿಪ್ಪೆ ಗುಂಡಿಯಲ್ಲಿ ಹಾಕುವುದರ ಮೂಲಕ ಮಕ್ಕಳ ಸಾವಿಗೆ ಕಾರಣರಾಗಬಾರದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್‌ನ ವೋಟ್ ಚೋರಿ ಅಭಿಯಾನ ದರೋಡೆಕೋರರು ನೀತಿ ಪಾಠ ಹೇಳಿದಂತಿದೆ

**ದಾವಣಗೆರೆ:** ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಪಕ್ಷದ ಮುಖಂಡರುಗಳು ವೋಟ್ ಚೋರಿ ಎಂಬ ಅಭಿಯಾನ ನಡೆಸುತ್ತಿರುವುದು ದರೋಡೆಕೋರರು ನೀತಿಯ ಪಾಠ ಹೇಳಿದ ಆಗಿದೆ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಯಶವಂತರಾವ್ ಜಾಧವ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸಿನ ರಾಷ್ಟ್ರೀಯ ನಾಯಕರಿಂದ ಹಿಡಿದು ಜಿಲ್ಲಾ ನಾಯಕರವರೆಗೆ ಈ ದೇಶದಲ್ಲಿ ಮಾಡಬಾರದ ಎಲ್ಲಾ ಅಕ್ರಮ ಕೃತ್ಯಗಳನ್ನು ನಡೆಸಿ ಅಧಿಕಾರ ಮಾಡಿದ ಕಾಂಗ್ರೆಸ್ನವರು ಇಂದು ದೇಶದ ನೆಚ್ಚಿನ ಪ್ರಧಾನಿ ಮೋದಿಯವರಿಗೆ ಟೀಕಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಮಾಜಿ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿ ವಿರುದ್ಧ ರಾಜ ನಾರಾಯಣ್ 1971ರ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ರಾಯಬರೇಲಿ ಕ್ಷೇತ್ರದಿಂದ ಸ್ಪರ್ಧೆ ಮಾಡಿ ಗೆಲುವಿನ ವಿಶ್ವಾಸವನ್ನು ಹೊಂದಿರುತ್ತಾರೆ ಆದರೆ ಚುನಾವಣೆ ನಂತರ ರಾಜ ನಾರಾಯಣ ಬಾರಿ ಅಂತರದ ಸೋಲನ್ನು ಅನುಭವಿಸುತ್ತಾರೆ. ಆದರೆ ರಾಜನಾರಾರಾಯಣ ಸೋಲನ್ನು ಒಪ್ಪಿಕೊಳ್ಳದೆ 24 ಏಪ್ರಿಲ್ 1971ರಲ್ಲಿ ಅಲಹಾಬಾದ್ ಹೈಕೋರ್ಟ್ನಲ್ಲಿ ಭ್ರಷ್ಟಾಚಾರದ ಕೇಸನ್ನು ದಾಖಲಿಸಿದ್ದರು ಎಂದರು.

ಇಂದಿರಾಗಾಂಧಿ ಚುನಾವಣೆಯಲ್ಲಿ ಸರ್ಕಾರಿ ಅಧಿಕಾರಿಗಳ ವಾಹನ ದುರ್ಬಳಕೆ, ಸರ್ಕಾರಿ ಅಧಿಕಾರಿಗಳಿಂದ ಸಂಪನ್ಮೂಲ ಕ್ರೋಡೀಕರಣ, ಮತದಾರರಿಗೆ ಹಣ ಹಂಚಿಕೆ, ಮದ್ಯ ಹಂಚಿಕೆ, ಕಂಬಳಿ ವಿತರಣೆ, ಚುನಾವಣಾ ವೆಚ್ಚ 35000 ಸಾವಿರಕ್ಕಿಂತ ಅತಿಯಾದ ಹಣ ಖರ್ಚು ಮಾಡಿರುವ ದಾಖಲೆ ಸಮೇತ ಅಲಹಾಬಾದ್ ಹೈಕೋರ್ಟ್ ಗಮನಕ್ಕೆ ತಂದಾಗ ಇವುಗಳನ್ನೆಲ್ಲ ಪರಿಶೀಲಿಸಿ ಶ್ರೀಮತಿ ಇಂದಿರಾಗಾಂಧಿಯವರು ತಪ್ಪಿತಸ್ಥರು ಎಂದು ತೀರ್ಮಾನಿಸಿ ರಾಯಬರೇಲಿ ಲೋಕಸಭಾ ಸದಸ್ಯತ್ವದಿಂದ ವಜಾ ಮಾಡಿತ್ತು. ಇದು ಕಾಂಗ್ರೆಸ್ಸಿನ ಇತಿಹಾಸ ಎಂದು ಟೀಕಿಸಿದರು.

ಅದೇ ರೀತಿ ದಾವಣಗೆರೆ ಜಿಲ್ಲೆಯಲ್ಲಿ 1998ರ ನಗರಸಭೆ ಅಧ್ಯಕ್ಷರ ಚುನಾವಣೆಯಲ್ಲಿ ಗೆಲ್ಲಲೇ ಬೇಕೆಂಬ ಕುತಂತ್ರದಿಂದ ಬಿಜೆಪಿ ನಗರಸಭಾ ಸದಸ್ಯ ಎಲ್ ಬಸವರಾಜ್ ಅವರನ್ನು ಕಿಡ್ನಾಪ್ ಮಾಡಿ ಮತ್ತು ಜೈಲು ಶಿಕ್ಷೆ ಅನುಭವಿಸಿದ ವ್ಯಕ್ತಿ ವೋಟ್ ಚೋರಿ ಎಂಬ ಅಭಿಯಾನದ ಬಗ್ಗೆ ಪತ್ರಿಕಾಗೋಷ್ಠಿ ನಡೆಸುತ್ತಾರೆ ಎಂದು ದಿನೇಶ್ ಕೆ.ಶೆಟ್ಟಿಗೆ ಪರೋಕ್ಷ ಟಾಂಗ್ ನೀಡಿದರು.

ಜಿಲ್ಲಾ ಉಸ್ತುವಾರಿ ಮಂತ್ರಿ ಎಸ್ ಎಸ್ ಮಲ್ಲಿಕಾರ್ಜುನ್ 1998ರ ಲೋಕಸಭಾ ಚುನಾವಣೆ ದಿವಸ ಗಲಭೆ ಸೃಷ್ಟಿ ಮಾಡಲು ರೌಡಿಯನ್ನು ಕರೆಸಿದ್ದರು. ಆದರೆ, ಇಂದು ನಮಗೆ ನೀತಿ ಪಾಠ ಹೇಳುತ್ತಿದ್ದಾರೆ. ಈ ದೇಶದ ಸಂವಿಧಾನವನ್ನೇ ಗಾಳಿಗೆ ತೂರಿ ಈ ದೇಶದ ಮೇಲೆ ತುರ್ತು ಪರಿಸ್ಥಿತಿಯನ್ನು ಏರಿ ಈ ದೇಶದ ಎಲ್ಲ ಮಹಾ ನಾಯಕರ ತುರ್ತುಪರಿಸ್ಥಿತಿ ವಿರುದ್ಧ ಹೋರಾಟ ಮಾಡಿದ ಮಹಾನ ನಾಯಕರಗಳನ್ನು ಜೈಲಿಗೆ ಹಾಕಿ ಅಧಿಕಾರ ನಡೆಸಿದ ಕಾಂಗ್ರೆಸ್ ಪಕ್ಷದ ಅದಿ ನಾಯಕಿಯ ಮೊಮ್ಮಗ ಇಂದು ಸಂವಿಧಾನದ ಬಗ್ಗೆ ಮಾತನಾಡುತ್ತಾನೆ. ಇದು ಕಾಂಗ್ರೆಸ್ ಪಕ್ಷದ ಇತಿಹಾಸ ಇಂತಹ ಕಾಂಗ್ರೆಸ್ ಪಕ್ಷದ ಇತಿಹಾಸವುಳ್ಳ ಜನ ಇಂದು ವೋಟ್ ಚೋರಿ ಎಂಬ ಅಭಿಯಾನವನ್ನು ನಡೆಸುತ್ತಿರುವುದು ನಮ್ಮ ದೇಶದ ದುರಂತವೇ ಸರಿ ಎಂದರು.

ಆದ್ದರಿಂದ ಹಿಂದೆ ಏನೆಲ್ಲ ನಡೆದಿದೆ ಈ ದೇಶದಲ್ಲಿ ಅಕ್ರಮಗಳು ಅವೆಲ್ಲದರ ಪಿತಾಮಹ ಜವಾಹರ್ ಲಾಲ್ ನೆಹರು ಮತ್ತು ಇಂದಿರಾಗಾಂಧಿ. ಚುನಾವಣಾ ಸಂದರ್ಭದಲ್ಲಿ ನಡೆದ ಎಲ್ಲಾ ಅಕ್ರಮಗಳ ಪಿತಾಮಹ ಎಸ್.ಎಸ್.ಮಲ್ಲಿಕಾರ್ಜುನ್ ಇಂತಹ ಮಹಾನ್ ನಾಯಕರುಗಳು ಇಂದು ಸಹಿ ಸಂಗ್ರಹ ಮಾಡುತ್ತಿರುವುದು ಈ ದೇಶದ ಮತ್ತು ದಾವಣಗೆರೆಯ ಜನತೆಗೆ ಮಾಡುತ್ತಿರುವ ಅಪಮಾನ. ನೀವು ಚುನಾವಣೆಯಲ್ಲಿ ಗೆಲ್ಲುವುದಕ್ಕೆ ಮಾಡಿರುವ ಎಲ್ಲಾ ಅಕ್ರಮಗಳ ಬಗ್ಗೆ ದೇಶ ಮತ್ತು ದಾವಣಗೆರೆ ಜನತೆ ಬಗ್ಗೆ ಕ್ಷಮೆಯನ್ನು ಕೇಳಿ ನೀವು ಮಾಡಿರುವ ಪಾಪಕ್ಕೆ ಪ್ರಾಯಶ್ಚಿತ ಮಾಡಿಕೊಳ್ಳಿ ಅನಂತರ ಮೋದಿಯ ಬಗ್ಗೆ ಟೀಕೆ ಮಾಡುವಿರಂತೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ರಾಜನಹಳ್ಳಿ ಶಿವಕುಮಾರ್, ಅಣಬೇರು ಜೀವನಮೂರ್ತಿ, ರಮೇಶ್ ನಾಯ್ಕ, ರಾಜು ನೀಲಗುಂದ, ಟಿಂಕರ್ ಮಂಜಣ್ಣ ಇತರರು ಇದ್ದರು.

# ದೇಶದ ಸುಸ್ಥಿರ ಅಭಿವೃದ್ಧಿಗೆ ಸಹಕಾರ ಸಂಘಗಳು ಸಹಕಾರಿ: ಶಾಸಕ ಸಿ. ಎನ್ ಬಾಲಕೃಷ್ಣ

**ಹಾಸನ:** ಸಹಕಾರ ಸಂಘಗಳು ಸದೃಢವಾಗಿ ಬೆಳೆಯಬೇಕು ಸಿಬ್ಬಂದಿಗಳು ಪ್ರಾಮಾಣಿಕರಾಗಿ ಕೆಲಸ ನಿರ್ವಹಿಸಬೇಕು. ಇಂದು ಬ್ಯಾಂಕಿಂಗ್ ಕ್ಷೇತ್ರ ಉದ್ಯಮವಾಗಿದ್ದು, ಬ್ಯಾಂಕಿಗೆ ಆಧಾರ ಸ್ತಂಭ ಎಂದು ಶ್ರವಣಬೆಳಗೊಳ ಕ್ಷೇತ್ರದ ಶಾಸಕರು, ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ನಿರ್ದೇಶಕರಾದ ಡಾ॥ ಸಿ.ಎನ್. ಬಾಲಕೃಷ್ಣ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಹಾಸನ ಜಿಲ್ಲಾ ಸಹಕಾರ ಒಕ್ಕೂಟ, ಹಾಸನ ಸಹಕಾರ ಕೇಂದ್ರ ಬ್ಯಾಂಕ್ ಮತ್ತು ಸಹಕಾರ ಇಲಾಖೆ ಸಂಯುಕ್ತಾಶ್ರಯದಲ್ಲಿ ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಸಿಬ್ಬಂದಿಗಳಿಗೆ ನಗರದಲ್ಲಿ ನಡೆದ ಒಂದು ದಿನದ ರಾಜ್ಯ ಮಟ್ಟದ ತರಭೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ಯಾಂಕ್ ಸಿಬ್ಬಂದಿಗಳು ನಗು ಮುಖದಿಂದ ಗ್ರಾಹಕರನ್ನು ಸ್ವಾಗತಿಸಿ,ವಿಶ್ವಾಸಾರ್ಹತೆಯುಳ್ಳ ಸೇವೆ ನೀಡಬೇಕು. ಒಳ್ಳೆಯ ಕೆಲಸಗಳನ್ನು ನಾಳೆಗೆ ಮುಂದೂಡದೇ ಇಂದೇ ಮಾಡಿ ಮುಗಿಸಿದ್ದಲ್ಲಿ ಅಭಿವೃದ್ಧಿ ಸಾಧ್ಯ ಎಂದರು.



ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿನ ಅಧ್ಯಕ್ಷ ಸೋಮನಹಳ್ಳಿ ನಾಗರಾಜು ಮಾತನಾಡಿ, ಇಂದು ಬ್ಯಾಂಕಿನಲ್ಲಿ ವಿವಿಧ ಸೇವೆಗಳ ಕುರಿತು ಗ್ರಾಹಕರಲ್ಲಿ ಅನೇಕ ಗೊಂದಲಗಳಿದ್ದು, ಬ್ಯಾಂಕಿನ ಸಿಬ್ಬಂದಿಗಳು ನಗು ಮುಖದಿಂದ ಗ್ರಾಹಕರನ್ನು ಕಂಡು ಅವರ ಸಮಸ್ಯೆಗಳಿಗೆ ಸ್ಪಂದಿಸಿದ್ದೇ ಆದಲ್ಲಿ ಅನೇಕ ಸಮಸ್ಯೆಗಳನ್ನು ಪರಿಹರಿಸಿದಂತಾಗುದೆ, ಕೇಂದ್ರದಲ್ಲಿ ಸಹಕಾರ ಇಲಾಖೆ ಕಾರ್ಯ ಆರಂಭ ಮಾಡಿರುವುದರಿಂದ ಮುಂದಿನ ದಿನಗಳಲ್ಲಿ ಸಹಕಾರ ಕ್ಷೇತ್ರಕ್ಕೆ ಹೊಸ ಆಯಾಮ ದೊರೆಯುತ್ತದೆಂದರು.

ಕಾರ್ಯಕ್ರಮದಲ್ಲಿ ಹಾಸನ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಸ್.ಎನ್. ಪ್ರಕಾಶ್, ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಜಯಕರಶೆಟ್ಟಿ ಬಿ. ಇಂದ್ರಾಳಿ, ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್. ನವೀನ್, ಜಿಲ್ಲಾ ಬ್ಯಾಂಕ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆರ್.ಜೆ. ಕಾಂತರಾಜು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೈದುಂಬಿದ ಭದ್ರಗೆ ರಸಗೊಬ್ಬರ ಮತ್ತು ಕೀಟನಾಶಕ ಮಾರಾಟಗಾರರಿಂದ ಬಾಗಿನ ಅರ್ಪಣೆ



**ದಾವಣಗೆರೆ :** ಮೈದುಂಬಿ ಹರಿಯುತ್ತಿರುವ ಜಿಲ್ಲೆಯ ಜೀವನಾಡಿ ಭದ್ರ ಜಲಾಶಯಕ್ಕೆ ತಾಲೂಕು ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕ ಮಾರಾಟಗಾರರ ಸಂಘದ ಸಹಯೋಗದಲ್ಲಿ ಸಂಘದ ಅಧ್ಯಕ್ಷರಾದ ಆರನೇಕಲ್ ಮಂಜಣ್ಣ ನೇತೃತ್ವದಲ್ಲಿ ಸಾಂಪ್ರದಾಯಿಕವಾಗಿ ಬಾಗಿನ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿಯಾದ ಎ.ಬಿ. ಸೋಮಶೇಖರ್ , ಸಹ ಕಾರ್ಯದರ್ಶಿಯಾದ ಸಮೃದ್ಧಿ ಸುರೇಶ್, ನಿರ್ದೇಶಕರುಗಳಾದ ಬ್ರಹ್ಮಲಿಂಗೇಶ್ವರ ಹನುಮಂತ ಗೌಡ, ಪಂಚಮಿ ಸೀಡ್ಸ್ ಶಂಭುಲಿಂಗಪ್ಪ, ಭೂಮಿಕಾ ಶ್ರೀಕಾಂತ್, ಹೊಸಕುಂದವಾಡ ಸಿದ್ದೇಶ್, ಜರಿಕಟ್ಟೆ ಮಾರ್ಕಂಡೇಶ್, ನರಗನಹಳ್ಳಿ ನಾಗರಾಜ್, ಕಾಶಿಪುರ ಗಿರೀಶ್, ಮಾಯಕೊಂಡದ ರವಿಕುಮಾರ್, ಮತ್ತು ಸಂಘದ ಖಜಾಂಚಿಯಾದ ಕಿರಣ್ ಬಾಳೇಹೊಲದ್ ಮತ್ತು ಸಂಘದ ಸರ್ವ ನಿರ್ದೇಶಕರು ಸದಸ್ಯರು ಪಾಲ್ಗೊಂಡಿದ್ದರು.

# ಜಿಲ್ಲೆಯಲ್ಲಿ ಎತ್ತನಬಂಡಿ ಗ್ರಾಮೀಣ ಕ್ರೀಡೆಗೆ ಪ್ರೋತ್ಸಾಹದನ ಎತ್ತಿನಬಂಡಿ ಕ್ರಿಡೆಯನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿನೆ

**ಗದಗ :** ಯುವ ಸಬಲೀಕರಣ ಮತ್ತು ಕ್ರಿಡಾ ಇಲಾಖೆಗೆ ಸಂಬಂದಿಸಿದಂತೆ ಸನ್ಮಾನ್ಯ ಮುಖ್ಯ ಮಂತ್ರಿಗಳು ತಮ್ಮ 2025/26ನೇಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 397ರಲ್ಲಿ ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಹಾಗೂ ಉತ್ತೇಜಿಸಲು ಎತ್ತಿನಬಂಡಿ ಕ್ರಿಡೆಯನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸುವ 15 ಸಂಘ ಸಂಸ್ಥೆಗಳಿಗೆ ತಲಾ 2 ಲಕ್ಷಗಳಂತೆ ಅನುದಾನ ನೀಡಿ ಪ್ರೋತ್ಸಾಯಿಸಲಾಗುವುದು.

ಗದಗ ಜಿಲ್ಲೆಯಲ್ಲಿ ಎತ್ತನಬಂಡಿ ಕ್ರೀಡೆಯನ್ನು ಆಯೋಜಿಸಲು ಆಸಕ್ತಿಯುಳ್ಳವರು ತಮ್ಮ ಸಂಘ ಸಂಸ್ಥೆಯ ಪೂರ್ಣ ವಿವರವನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೆ.ಎಚ್ ಪಾಟೀಲ ಜಿಲ್ಲಾ ಕ್ರಿಡಾಂಗಣ ಗದಗ ಇಲ್ಲಿಗೆ ದಿನಾಂಕ 16/10/2025 ರೊಳಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲು ಕೊರಿದೆ.

# ಪ್ರಗತಿ ಪರಿಶೀಲನಾ ಸಭೆ

**ಗದಗ :** ಕನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್ ಪಾಟೀಲ್ ರವರ ಅಧ್ಯಕ್ಷತೆಯಲ್ಲಿ ಆಕ್ಟೋಬರ್ 8 ರಂದು ಬೆಳಗ್ಗೆ 10ಗಂಟೆಗೆ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗದಲ್ಲಿ ಬೆಳಗಾವಿ ವಿಭಾಗದ ಕಿತ್ತೂರು ಕರ್ನಾಟಕದ ಅಡಿಯಲ್ಲಿ ಬರುವ 07ಜಿಲ್ಲೆಗಳು 2026/27ನೇ ಸಾಲಿನ ವಾರ್ಷಿಕ ಜಿಲ್ಲಾ ಕರುಡು ಯೋಜನೆ, ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ-2025 ಹಾಗೂ ಜಿಲ್ಲಾ ಮಾನವ ಅಭಿವೃದ್ಧಿ ಯೋಜನೆ-2025 ವರದಿಗಳ ತಯಾರಿಕೆ ಕುರಿತು ಪ್ರಗತಿ ಪರಿಶೀನಾ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿರುತ್ತಾರೆ.

# ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

**ಗದಗ :** 2025-26 ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ವಸತಿಶಾಲೆ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ-ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ನೀಡಲು ಜಿಲ್ಲೆಯಲ್ಲಿರುವ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಛೇರಿಗೆ ದಿನಾಂಕ: 09.10.2025ರ ಒಳಗಾಗಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ ಗದಗ ದೂ.ಸಂ: 08372-297494 ಸಂಪರ್ಕಿಸಲು ಕೊರಿದ್ದಾರೆ.

# ಶಿವಮೊಗ್ಗ ಜಿಲ್ಲಾ ಮಟ್ಟದ ಯುವಜನೋತ್ಸವ

**ಶಿವಮೊಗ್ಗ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅ. 15 ರಂದು ಬೆಳಗ್ಗೆ 9.00 ರಿಂದ ಕುವೆಂಪು ರಂಗಮಂದಿರದಲ್ಲಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದಲ್ಲಿ ಜಾನಪದ ನೃತ್ಯ, ಜಾನಪದ ಗೀತೆ, ಕಥೆ ಬರೆಯುವುದು, ಚಿತ್ರಕಲೆ, ಘೋಷಣೆ ಹಾಗೂ ಕವಿತೆ ಬರೆಯುವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಸ್ಪರ್ಧೆಯಲ್ಲಿ ಭಾಗವಹಿಸುವ ಯುವಕ/ಯುವತಿಯರು 15 ರಿಂದ 29 ವರ್ಷ ವಯೋಮಿತಿಯೊಳಗಿದ್ದು, ನೋಂದಣಿ ಸಮಯದಲ್ಲಿ ಆಧಾರ್ ಕಾರ್ಡ್/ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ ಜನನ ಪ್ರಮಾಣ ಪತ್ರ ಇವುಗಳಲ್ಲಿ ಯಾವುದಾದೊಂದು ದಾಖಲೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಶಿವಮೊಗ್ಗ ಜಿಲ್ಲೆಯಲ್ಲಿ ವಾಸವಾಗಿರುವ ದೃಢೀಕರಣ ಪತ್ರವನ್ನು ತರಬೇಕು. ರಾಷ್ಟ್ರಮಟ್ಟದ ಯುವಜನೋತ್ಸವದಲ್ಲಿ ಸತತವಾಗಿ 3 ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೆ ಅಂತಹ ಯುವಜನರು ಭಾಗವಹಿಸುವಂತಿಲ್ಲ. ಆಸಕ್ತರು ಅ. 14 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಇವರ ಕಚೇರಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಶಿವಮೊಗ್ಗ ಕಚೇರಿಯನ್ನು ಸಂಪರ್ಕಿಸುವುದು.

## ಅ. 10 ರಂದು ಮಣ್ಣಿನಿಂದ ತಯಾರಿಸಿದ ವಿವಿಧ ಬಗೆಯ ದೀಪಗಳ ಮಾರಾಟ

**ದಾವಣಗೆರೆ :** ಜಿಲ್ಲಾ ಪಂಚಾಯತ್, ಎನ್.ಆರ್.ಎಲ್.ಎಂ ಸಂಜೀವಿನಿ ಕೆ.ಎಸ್.ಆರ್.ಎಲ್.ಪಿ.ಎಸ್ ವತಿಯಿಂದ ದೀಪಾವಳಿ ಹಬ್ಬದ ಪ್ರಯುಕ್ತ ಗ್ರಾಮೀಣ ಭಾಗದ ಸಂಜೀವಿನಿ ಎನ್.ಆರ್. ಎಲ್.ಎಂ ಮಹಿಳಾ ಸ್ವ-ಸಹಾಯ ಸಂಘದವರು ಮಣ್ಣಿನಿಂದ ತಯಾರಿಸಿದ ವಿವಿಧ ಬಗೆಯ ದೀಪಗಳನ್ನು ಮಾರಾಟ ಮಾಡಲು ಮತ್ತು ಮಹಿಳಾ ಸಂಘಗಳಿಗೆ ಉತ್ತೇಜಿಸುವ ಸಲುವಾಗಿ ದೀಪ ಸಂಜೀವಿನಿ ಕಾರ್ಯಕ್ರಮವನ್ನು ಬಿ.ಎಸ್. ಚೆನ್ನಬಸಪ್ಪ ಅಂಡ್ ಸನ್ಸ್ , ಎ.ವಿ.ಕೆ ಕಾಲೇಜು ರಸ್ತೆ ಹತ್ತಿರ ಮತ್ತು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಮುಂಭಾಗದಲ್ಲಿ ಅಕ್ಟೋಬರ್ 10 ರಂದು ಬೆಳಗ್ಗೆ 10 ರಿಂದ ರಾತ್ರಿ 10 ಗಂಟೆಯವರಿಗೆ ಮಾರಾಟವನ್ನು ಮಾಡಲಿದ್ದಾರೆ. ಸಾರ್ವಜನಿಕರು ಮಣ್ಣಿನಿಂದ ತಯಾರಿಸಿದ ವಸ್ತುಗಳನ್ನು ಹೆಚ್ಚು ಹೆಚ್ಚು ಖರೀದಿಸಿ ಮಹಿಳಾ ಸಂಘಗಳನ್ನು ಉತ್ತೇಜಿಸುವಂತೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ತಿಳಿಸಿದ್ದಾರೆ.

## ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ :** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಅಕ್ಟೋಬರ್ 9 ಮತ್ತು 10 ರಂದು ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಸೀಮಿತವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಅವಧಿಯನ್ನು ಅಕ್ಟೋಬರ್ 14 ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2025

## ಸಂತಸಮಯ ಸಮಾಜ ಕಟ್ಟುವಲ್ಲಿ ಹಿರಿಯ ನಾಗರಿಕರ ಪಾತ್ರ ಬಹು ಮುಖ್ಯ: ಸಚಿವ ಎಚ್.ಕೆ.ಪಾಟೀಲ




**ಗದಗ :** ಭಾರತೀಯ ಸಂಸ್ಕೃತಿಯಲ್ಲಿ ಹಿರಿಯ ನಾಗರಿಕರಿಗೆ ವಿಶಿಷ್ಟ ಗೌರವವನ್ನು ಹಾಗೂ ಪ್ರಾಶಸ್ತ ವನ್ನು ಕೊಡಲಾಗಿದೆ. ಹಿರಿಯ ನಾಗರಿಕರ ಮಾರ್ಗದರ್ಶನ ಹಾಗೂ ಅನುಭವಗಳು ಯುವ ಪೀಳಿಗೆಗೆ ದಾರಿದೀಪವಾಗಿದ್ದು ಸಂತಸಮಯ ಹಾಗೂ ಬಲಿಷ್ಟ ಸಮಾಜ ಕಟ್ಟುವಲ್ಲಿ ಹಿರಿಯ ನಾಗರಿಕರ ಪಾತ್ರ ಬಹು ಮುಖ್ಯವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರುಗಳ ಸಹಯೋಗದಲ್ಲಿ ಬುಧವಾರ " ಹಿರಿಯ ನಾಗರಿಕರು: ನಮ್ಮ ಆಶೋತ್ತರಗಳು, ನಮ್ಮ ಯೋಗಕ್ಷೇಮ ಮತ್ತು ನಮ್ಮ ಹಕ್ಕುಗಳನ್ನು ಸ್ಥಳೀಯ ಮತ್ತು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಬಲ್ಲ ಸಶಕ್ತರು" ಎಂಬ ಘೋಷವಾಕ್ಯದಡಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ -2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರಿಕರನ್ನು ಪ್ರತಿಯೊಬ್ಬರೂ ಗೌರವಿಸಬೇಕು ಹಾಗೂ ಪೂಜ್ಯ ಭಾವನೆಯಿಂದ ಕಾಣಬೇಕು. ಹಿರಿಯ ನಾಗರಿಕರು ತಮ್ಮ ತಮ್ಮ ಕುಟುಂಬಗಳಲ್ಲಿ ಸಾಕ್ಷಿಪ್ರಜ್ಞೆಯಾಗಿ ಮಾರ್ಗದರ್ಶನ ಮಾಡುತ್ತಾರೆ. ಭಾರತೀಯ ಸಮಾಜದಲ್ಲಿ ಹಿರಿಯರಿಗೆ ಕೊಟ್ಟಿರುವ ಗೌರವದ ಸಂಸ್ಕೃತಿಯಿಂದ ಭಾರತ ದೇಶವು ಸುಸಂಸ್ಕೃತ ಹಾಗೂ ಸಂತೋಷಕರ ಸಮಾಜವನ್ನಾಗಿಸಲು ಕಾರಣವಾಗಿದೆ. ಹಿರಿಯ ನಾಗರಿಕರಿಗೆ ಸರ್ಕಾರದಿಂದ ವಿವಿಧ ಯೋಜನೆಗಳು ಜಾರಿಯಲ್ಲಿದ್ದು ಅವುಗಳ ಸದ್ಬಳಕೆಯಾಗಬೇಕು.

ಹಿರಿಯ ನಾಗರಿಕರಿಗೆ ಸರಕಾರದಿಂದ ವಿವಿಧ ಯೋಜನೆಗಳ ಸೌಲಭ್ಯ ವಿತರಣೆ ಹಾಗೂ ಇನ್ನಿತರ ಸಮಸ್ಯೆಗಳು ಉಂಟಾದಲ್ಲಿ ಜಿಲ್ಲಾಡಳಿತ ಆ ಸಮಸ್ಯೆಗಳಿಗೆ ಸ್ಪಂದಿಸುತ್ತದೆ. ಪ್ರಭುವಿನೆಡೆಗೆ

ಪ್ರಭುತ್ವ ಯಂತ್ರದಲ್ಲಿಯೂ ಸಹ ಹಿರಿಯ ನಾಗರಿಕರು ತಮ್ಮ ಸಮಸ್ಯೆಗಳ ಕುರಿತು ದೂರು ದಾಖಲಿಸಬಹುದಾಗಿದೆ ಎಂದು ಸಚಿವ ಎಚ್. ಕೆ.ಪಾಟೀಲ ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿರಿಯ ನಾಗರಿಕರನ್ನು ಗೌರವಿಸಲಾಯಿತು. ಹಿರಿಯ ನಾಗರಿಕರಿಗಾಗಿ ಆಯೋಜಿಸಲಾಗಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ ಜಗದೀಶ, ಅಪರ

ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ಪ್ರೊ.ಕೆ.ಎಚ್.ಬೇಲೂರ, ಗದಗ ಜಿಲ್ಲಾ ಹಿರಿಯ ನಾಗರಿಕರ ಸಂಘದ ಅಧ್ಯಕ್ಷರಾದ ಜಿ.ಎಸ್.ಹಿರೇಮಠ, ಕ.ರಾ. ಹಿ.ನಾ ಹಾಗೂ ನಿ.ನಾ. ಸಂಘದ ಎಸ್.ಕೆ.ಖಂಡೆಪ್ಪಗೌಡರ, ಗದಗ ಪ್ರೋಬಸ್ ಕ್ಲಬದ ಬಿ.ಎಸ್.ಗೌಡರ, ಡಾ.ರಾಜೇಂದ್ರ ಗೋಡಬೋಲೆ, ಹಿರಿಯ ನಾಗರಿಕರ ಸಂಘದ ತಾಲೂಕಾ ಘಟಕದ ಅಧ್ಯಕ್ಷರು, ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಗಳ, ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು, ಬಿ.ಎಮ್. ಬಿಳೆಯಲಿ, ಹನುಮಂತಪ್ಪ ಗರಗ, ಬಸಯ್ಯ ಸ್ಥಾವರಮಠ, ಲೋಕಪ್ಪ ಸೇರಿದಂತೆ ವಿವಿಧ ಹಿರಿಯ ನಾಗರಿಕರು, ಗಣ್ಯರು, ಹಾಜರಿದ್ದರು.

ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ್ ಸರ್ವರನ್ನು ಸ್ವಾಗತಿಸಿದರು. ಪ್ರೊ ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

## ಚುನಾವಣಾ ಆಯೋಗದ ವಿರುದ್ಧ ಹರಿಹಾಯ್ದ ಜೈರಾಮ್ ರಮೇಶ್



**ನವದೆಹಲಿ:** ಮತದಾರರ ಪಟ್ಟಿಯಿಂದ ನಾಗರಿಕರಲ್ಲದವರನ್ನು ತೆಗೆದುಹಾಕಲು ಎಸ್‌ಐಆರ್ ಪ್ರಕ್ರಿಯೆಯ ಅಗತ್ಯವು ಹೆಚ್ಚಾಗಿದೆ ಎಂದು ಕಾಂಗ್ರೆಸ್ ಹೇಳಿದೆ ಆದರೆ ಬಿಹಾರದಲ್ಲಿ ಎಷ್ಟು ನಾಗರಿಕರಲ್ಲದವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂಬುದರ ಕುರಿತು ದೇಶಕ್ಕೆ ಅರಿವು ಮೂಡಿಸುವ ಸಮಗ್ರತೆ ಅಥವಾ ಧೈರ್ಯ ಚುನಾವಣಾ ಆಯೋಗಕ್ಕೆ ಇಲ್ಲ ಎಂದು ದೂರಿದೆ.

ಬಿಹಾರದಲ್ಲಿ ಎಷ್ಟು ನಾಗರಿಕರಲ್ಲದವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಚುನಾವಣಾ ಸಂಸ್ಥೆ ತಿಳಿಸಿದ್ದರೆ, ಅದು ಈಗಾಗಲೇ ಇರುವುದಕ್ಕಿಂತ ಹೆಚ್ಚು ಬಹಿರಂಗವಾಗುತ್ತಿತ್ತು ಎಂದು ವಿರೋಧ ಪಕ್ಷ ಹೇಳಿದೆ.

ಬಿಹಾರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಸುಪ್ರಿಂ ಕೋರ್ಟ್ ವಿಚಾರಣೆ ನಡೆಸಲಿದೆ ಎಂದು ಕಾಂಗ್ರೆಸ್ ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

ಸುಪ್ರಿಂ ಕೋರ್ಟ್ ಮಧ್ಯಸ್ಥಿಕೆಗಳು ಸಾಮೂಹಿಕ ಮತದಾನದ ಅಭಾವದ ಭಯವನ್ನು ನಿವಾರಿಸಿದರೂ, ನಿಖರತೆ, ಸಮಾನತೆ, ಪಾರದರ್ಶಕತೆ ಮತ್ತು ನ್ಯಾಯಸಮ್ಮತತೆಯ ದೃಷ್ಟಿಕೋನದಿಂದ ಈ ಪ್ರಕ್ರಿಯೆ ಅಪೇಕ್ಷಿತವಾಗಿರುವುದನ್ನು ಬಿಟ್ಟುಬಿಟ್ಟಿದೆ ಎಂದು ವಿಶ್ಲೇಷಣೆ ಹೇಳಿಕೊಂಡಿದೆ.ಈ ಉತ್ತಮ ವಿಶ್ಲೇಷಣೆಯು ಚುನಾವಣಾ ಆಯೋಗವು ನಡೆಸಿದ ಸಂಪೂರ್ಣ ಪ್ರಕ್ರಿಯೆ ಸಂಪೂರ್ಣತೆ, ಸಮಾನತೆ ಮತ್ತು ನಿಖರತೆಯ ಮೂರು ಅಂಶಗಳಲ್ಲಿ ವಿಫಲವಾಗಿದೆ ಎಂದು ತೋರಿಸುತ್ತದೆ ಎಂದು ರಮೇಶ್ ಎಕ್ ಮಾಡಿದ್ದಾರೆ.

ಮತದಾರರ ಪಟ್ಟಿಯಿಂದ ನಾಗರಿಕರಲ್ಲದವರನ್ನು ತೆಗೆದುಹಾಕಲು ಪ್ರಕ್ರಿಯೆಯ ಅಗತ್ಯದ ಬಗ್ಗೆ ಹೆಚ್ಚಿನದನ್ನು ಹೇಳಲಾಗಿದೆ. ಬಿಹಾರದಲ್ಲಿ ಅಂತಹ ಎಷ್ಟು ನಾಗರಿಕರಲ್ಲದವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂಬುದರ ಕುರಿತು ದೇಶಕ್ಕೆ ಅರಿವು ಮೂಡಿಸುವ ಸಮಗ್ರತೆ ಅಥವಾ ಧೈರ್ಯ ಆಯೋಗಕ್ಕೆ ಇಲ್ಲ ಎಂದು ಅವರು ಹೇಳಿದರು.

## ಜವಳಿ ಮತ್ತು ಕೈಮಗ್ಗ ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಚೇತನ ಗೌಡ ಅಧಿಕಾರ ಸ್ವೀಕಾರ

**ಬೆಂಗಳೂರು :** ಕರ್ನಾಟಕ ಜವಳಿ ಮತ್ತು ಕೈಮಗ್ಗ ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಚೇತನ ಗೌಡರವರಿಗೆ ಭಾರತೀಯ ಯುವ ಕಾಂಗ್ರೆಸ್ಸಿನ ರಾಷ್ಟ್ರೀಯ ವಕ್ತಾರರು ಹಾಗು ಕೆಪಿಸಿಸಿ ನೀತಿ, ಸಂಶೋಧನೆ ಮತ್ತು ತರಬೇತಿ ವಿಭಾಗದ ರಾಜ್ಯ ಸಂಚಾಲಕರಾದ ಶ್ರೀ ಆದರ್ಶ ಹುಂಚದಕಟ್ಟೆ ಅವರು ಅಭಿನಂದನೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ಭಾರತೀಯ ಯುವ ಕಾಂಗ್ರೆಸ್ಸಿನ ಮಾಜಿ ರಾಷ್ಟ್ರಾಧ್ಯಕ್ಷರಾದ ಶ್ರೀನಿವಾಸ್ ಬಿ.ವಿ, ಶಿವಮೊಗ್ಗ ಜಿಲ್ಲಾ ಕಾಂಗ್ರೆಸ್ ಮುಖಂಡರಾದ ಮಧುಸೂಧನ್ ಸಿ,ಜಿ ತೀರ್ಥಹಳ್ಳಿ ವಿಧಾನಸಭಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಪೂರ್ಣೇಶ್ ಕೆಳಕೆರೆ, ಚಿಕ್ಕಮಗಳೂರು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀಜಿತ್ ಗೌಡ ದಂಡಿನಮಕ್ಕಿ ಹಾಗು ಶ್ರಂಗೇರಿ ವಿಧಾನಸಭಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ದುರ್ಗಾ ಚರಣ್ ಗೌಡ ಜೊತೆಗಿದ್ದರು.

## ನಂದಿನಿ ಪಾರ್ಲರ್‌ಗೆ ನುಗ್ಗಿದ ಬಿಎಂಟಿಸಿ ಬಸ್, ತಪ್ಪಿದ ಅನಾಹುತ

**ಬೆಂಗಳೂರು:** ಬೆಳ್ಳಂಬೆಳಗ್ಗೆ ಬಿಎಂಟಿಸಿ ಬಸ್‌ವೊಂದು ನಿಲ್ದಾಣದಲ್ಲಿನ ನಂದಿನಿ ಪಾರ್ಲರ್‌ಗೆ ನುಗ್ಗಿದ್ದು ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಕಮಲಾನಗರದ ಶಂಕರ್‌ನಾಗ್ ಬಸ್ ನಿಲ್ದಾಣದಲ್ಲಿ ಇಂದು ಬೆಳಗ್ಗೆ 7.30 ಸುಮಾರಿನಲ್ಲಿ ಚಾಲಕ ಬಿಎಂಟಿಸಿ ನಿಲ್ದಾಣದಿಂದ ಮೆಜೆಸ್ಟಿಕ್ ಕಡೆಗೆ ಹೋಗಲು ಬಸ್ಸನ್ನು ಹೊರಗೆ ತೆಗೆಯುತ್ತಿದ್ದರು.ಆ ಸಂದರ್ಭದಲ್ಲಿ ಬಸ್‌ನ ಬ್ರೇಕ್ ಫೇಲ್ ಆಗಿ ನಿಯಂತ್ರಣಕ್ಕೆ ಸಿಗದಿದ್ದಾಗ ಗಾಬರಿಗೊಂಡ ಚಾಲಕ ರಸ್ತೆಯಲ್ಲಿ ಜನರು ಇರುವುದು ಗಮನಿಸಿ ತಕ್ಷಣ ಹ್ಯಾಂಡ್ ಬ್ರೇಕ್ ಹಿಡಿದು ತಿರುಗಿಸಿದ್ದಾರೆಆದರೆ ಅದೂ ಸಹ ಕೆಲಸ ಮಾಡದೆ ನಂದಿನಿ ಪಾರ್ಲರ್ ಐಸ್‌ಕ್ರಿಮ್ ಅಂಗಡಿಗೆ ನುಗ್ಗಿದೆ.

ಇದರಿಂದಾಗಿ ಬಸ್‌ನಲ್ಲಿದ್ದ ಪ್ರಯಾಣಿಕರು ಹಾಗೂ ನಿಲ್ದಾಣದಲ್ಲಿದ್ದವರು ಆತಂಕಗೊಂಡರು. ಅದೃಷ್ಟವಶಾತ್ ಯಾವುದೇ ಸಾವುನೋವುಗಳಾಗಿಲ್ಲ. ಬಸ್ ಚಾಲಕ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ.ಈ ಬಗ್ಗೆ ವಿಜಯನಗರ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸುದ್ದಿ ತಿಳಿದು ಬಿಎಂಟಿಸಿ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ, ತನಿಖೆ ಆರಂಭಿಸಿದ್ದಾರೆ.

## ಮಾಗಡಿ ತಾಲ್ಲೂಕು ಪುರಸಭೆ ಮುಂಭಾಗದಲ್ಲಿ 400ಮರಗಳ ಮಾರಣಹೋಮಕ್ಕೆ ಖಂಡನೆ

**ಬೆಂಗಳೂರು:** ಮಾಗಡಿ ತಾಲ್ಲೂಕು ಪುರಸಭೆ ಮುಂಭಾಗದಲ್ಲಿ ಇರುವ ಪೂಜ್ಯ ಕೆಂಪೇಗೌಡರ ಪ್ರತಿಮೆ ಉಳಿವಿಗಾಗಿ ಮತ್ತು ಪ್ರತಿಮೆ ಸುತ್ತ ಮುತ್ತಲು ಇರುವ 400ಕ್ಕೂ ಹೆಚ್ಚು ಮರಗಳ ಮರಣಹೋಮ ಮಾಡುಲು ಹೊರಟಿರುವ ಪುರಸಭೆ ಮತ್ತು ಸ್ಥಳೀಯ ಶಾಸಕರ ನಡವಳಿಕೆಗೆ ಶ್ರೀಕೆಂಪೇಗೌಡ ಅಭಿವೃದ್ಧಿ ಸಮಿತಿ ಅಧ್ಯಕ್ಷ ಡಾ.ಎಚ್.ಎಂ.ಕೃಷ್ಣಮೂರ್ತಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ನಾಡು ಕಟ್ಟಿದ ಕೆಂಪೇಗೌಡರಿಗೆ ಅವರ ಪ್ರತಿಮೆ ಸ್ಥಳವಾಕಾಶ ಇಲ್ಲದಂತೆ ಆಗಿದೆ ಎಂಬುದು ಶೋಚನೀಯ ಸಂಗತಿ. ಕೆಂಪೇಗೌಡರು ಪ್ರತಿಮೆ ಕಳೆದ 22ವರ್ಷಗಳ ಹಿಂದೆ ಪುರಸಭೆ ಮುಂಭಾಗದಲ್ಲಿ ಪ್ರತಿಷ್ಠಾಪನೆ ಮಾಡಿ, ಪ್ರತಿವರ್ಷ ಕೆಂಪೇಗೌಡ ಜನದಿನಾಚರಣೆ ಅದ್ದೂರಿಯಾಗಿ ಅಚರಿಸಿಕೊಂಡು ಬರಲಾಗುತ್ತಿದೆ' ಎಂದು ಹೇಳಿದರು.




ಅಭಿವೃದ್ಧಿಯ ಹೆಸರಿನಲ್ಲಿ ಪೂಜ್ಯ ಕೆಂಪೇಗೌಡರ ಪ್ರತಿಮೆ ಸ್ಥಳಾಂತರ ಮತ್ತು ಅದರ ಸುತ್ತಮುತ್ತಲ 400 ಮರ ಗಿಡಗಳಗಳನ್ನು ಕಡಿಯಲಾಗುತ್ತಿದೆ. ಮಾಗಡಿ ಕ್ಷೇತ್ರದಲ್ಲಿ ಸ್ಥಳೀಯ ಶಾಸಕರು, ಪ್ರತಿಮೆ ಸ್ಥಳಾಂತರ ಮತ್ತು ಅದರ ಸುತ್ತಮುತ್ತಲ 400 ಮರ ಗಿಡಗಳಗಳನ್ನು ಕಡಿಯಲಾಗುತ್ತಿದೆ. ಮಾಗಡಿ ಕ್ಷೇತ್ರದಲ್ಲಿ ಸ್ಥಳೀಯ ಶಾಸಕರು, ಪುರಸಭೆ ಅಧಿಕಾರಿಗಳು ಬೇಜವಾಬ್ದಾರಿ ಆಡಳಿತ ಮಾಗಡಿ ಕೆಂಪೇಗೌಡರರ ಕುರಿತು ಅಭಿಮಾನವಿಲ್ಲದ ಶೂನ್ಯರು ಇವರು ಎಂದು ಕಿಡಿಕಾರಿದರು.

ಕೋಟೆ ಕಂದಕ ಮುಚ್ಚುವ ಕಾರ್ಯ ಮಾಡುವ ಪ್ರಯತ್ನ ಮಾಡಿದರು ಇದೀಗ ಕೆಂಪೇಗೌಡರ ಪ್ರತಿಮೆ ತೆಗೆಯುವ ಪ್ರಯತ್ನ, 400ಮರಗಳ ತೆರವು ಕಾರ್ಯಕ್ಕೆ ತಡೆ ನೀಡಬೇಕು ಕೋರ್ಟ್ ನಲ್ಲಿ ಕೇಸ್ ದಾಖಲಿಸಲಾಗಿದೆ ಎಂದು ಹೇಳಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಅಭಿಪ್ರಾಯಕ್ಕೆ ಮನ್ನಣೆ ನೀಡಬೇಕು ಜನರ ಕೆಂಪೇಗೌಡ ಪ್ರತಿಮೆ ಸ್ಥಳಾಂತರ ಮಾಡಬಾರದು ಹಾಗೂ ಮರಗಳನ್ನು ಉಳಿಸಬೇಕು ಎಂದು ಜನಾಭಿಪ್ರಾಯಕ್ಕೆ ಮನ್ನಣೆ ನೀಡಬೇಕು ಎಂದು ಹೇಳಿದರು. ದಲಿತ ಸಮುದಾಯದ ಮುಖಂಡರಾದ ಜಯರಾಮಯ್ಯ, ಹಿರಿಯ ಪತ್ರಕರ್ತರಾದ ಕುಮಾರ್ ರವರು ಭಾಗವಹಿಸಿದ್ದರು.

## ಈಶ್ವರ ವನದಲ್ಲಿ ಭೂಮಿ ಹುಣ್ಣಿಮೆ ಭೂ ತಾಯಿಯ ಋಣ ತೀರಿಸೋಣ



**ಶಿವಮೊಗ್ಗ:** ನವ್ಯಶ್ರೀ ಈಶ್ವರವನ ಚಾರಿಟಬಲ್ ಟ್ರಸ್ಟ್ ಹಾಗೂ ಪರೋಪಕಾರಂನ ಸಂಯುಕ್ತಾಶ್ರಯದಲ್ಲಿ ಇಂದು ಮಂಗಳವಾರ ಬೆಳಿಗ್ಗೆ ತಾಲೂಕಿನ ಅಬ್ಬಲಗೆರೆ ಬಳಿಯ ಈಶ್ವರವನದಲ್ಲಿ ಭೂಮಿ ಹುಣ್ಣಿಮೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ಹೆತ್ತ ತಾಯಿಯಷ್ಟೇ ಹೊತ್ತ ತಾಯಿಗೂ (ಭೂತಾಯಿ) ಕೂಡ ನಾವು ಪ್ರಾಮುಖ್ಯತೆ ನೀಡಬೇಕು. ಪರಿಸರ ಸಂರಕ್ಷಿಸಿ, ಮಾಲಿನ್ಯವನ್ನು ತಡೆಗಟ್ಟುವ ಮೂಲಕ ಭೂತಾಯಿಯ ಋಣ ತೀರಿಸಬೇಕೆಂದರು.

ಸಮಾಜಮುಖಿಯಾಗಿ ಸಕಾರಾತ್ಮಕ ಚಿಂತನೆ ಹೊಂದಿರುವ ಪರೋಪಕಾರಂ ಕುಟುಂಬದವರು ಜಾತಿ, ಮತ ಬೇಧವಿಲ್ಲದೆ ಪರಸ್ಪರ ಮಾನವೀಯ ಮೌಲ್ಯ, ಸಂಬಂಧಗಳನ್ನು ಬಲಪಡಿಸಲು ಸಾಮೂಹಿಕವಾಗಿ ಭೂಮಿ ಹುಣ್ಣಿಮೆ ಆಚರಿಸುತ್ತಿರುವುದು ನಾಡಿಗೆ ಮಾದರಿಯಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಟ್ರಸ್ಟ್‌ನ ಅಧ್ಯಕ್ಷ ನವ್ಯಶ್ರೀ ನಾಗೇಶ್, ಉಪಾಧ್ಯಕ್ಷೆ ಶಶಿಕಲಾ ನಾಗೇಶ್ ಅವರನ್ನು ಅಭಿನಂದಿಸಲಾಯಿತು. ಜಯಲಕ್ಷ್ಮಿ ಕೆ.ಎಸ್. ಈಶ್ವರಪ್ಪ, ಜಿಪಂ ಮಾಜಿ ಸದಸ್ಯ ಕೆ.ಇ. ಕಾಂತೇಶ್,. ಶಾಲಿನಿ ಕಾಂತೇಶ್, ಶ್ರೀಧರ್ ಎನ್.ಎಂ., ಜೋಡಿಯಾಕ್ ಪ್ರಕಾಶ್, ನಾಗರಾಜ್ ಶೆಟ್ಟರ್, ದೀಪ ಶೆಟ್ಟರ್, ಅನಿಲ್ ಹೆಗ್ಗಡೆ, ದೀಪ ಶ್ರೀಧರ್, ರಾಘವೇಂದ್ರ ಮಹೇಂದ್ರಕರ್, ಸಾರಥಿ ಶಿವಾನಂದ್, ಎಂ. ಶ್ರೀಕಾಂತ್, ಗಾಡಿಕೊಪ್ಪ ಕುಮಾರ್, ಶಾಂತಮ್ಮ ಕುಮಾರಣ್ಣ, ವೀರನಗೌಡ ಬಿರಾದರ್, ಕಾವೇರಿ ಬಿರಾದಾರ್, ದುಮ್ಮಳ್ಳಿ ರಾಜಣ್ಣ, ಜಿ.ವಿ. ಪಾಂಡುರಂಗಪ್ಪ, ಓಂ ಪ್ರಕಾಶ್, ಲೀಲಾಬಾಯಿ ಎನ್.ಎಂ., ಪಾರ್ಶ್ವನಾಥ್ ಬಿ., ಮತ್ತಿತರರು ಭಾಗವಹಿಸಿದ್ದರು.

## ಭಾರತ-ಪಾಕ್ ಯುದ್ಧ ನಿಲ್ಲಿಸಿದ್ದು ನಾನೇ" ಎಂದು ಇನ್ನೂ ಕನವರಿಸುತ್ತಿರುವ ಟ್ರಂಪ್

**ನ್ಯೂಯಾರ್ಕ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಯುದ್ಧಗಳನ್ನು ನಿಲ್ಲಿಸುವ ಕ್ರಮವಾಗಿ ಸುಂಕಗಳ ಬಳಕೆಯನ್ನು ವಿವರಿಸಿದ್ದಾರೆ ಮತ್ತು ಇತ್ತೀಚಿನ ಸಂಘರ್ಷದ ಸಮಯದಲ್ಲಿ ಭಾರತ ಮತ್ತು ಪಾಕಿಸ್ತಾನದೊಂದಿಗೆ ಅವರ ಸಂವಹನವು ಬಹಳ ಪರಿಣಾಮಕಾರಿ ಎಂದು ಹೇಳಿದರು, ಪರಮಾಣು ಶಸ್ತ್ರಸಜ್ಜಿತ ನೆರೆಹೊರೆಯವರ ನಡುವಿನ ಯುದ್ಧವನ್ನು ವ್ಯಾಪಾರವನ್ನು ಬಳಸಿಕೊಂಡು ಕೊನೆಗೊಳಿಸುವ ಅವರ ಹೇಳಿಕೆಯನ್ನು ಪುನರಾವರ್ತಿಸಿದರು.

ಸುಂಕಗಳು ಅಮೆರಿಕಕ್ಕೆ ಬಹಳ ಮುಖ್ಯ. ಸುಂಕಗಳಿಂದಾಗಿ ನಾವು ಶಾಂತಿಪಾಲಕರು. ನಾವು ನೂರಾರು ಶತಕೋಟಿ ಡಾಲರ್‌ಗಳನ್ನು ಗಳಿಸುವುದಲ್ಲದೆ, ಸುಂಕಗಳಿಂದಾಗಿ ನಾವು ಶಾಂತಿಪಾಲಕರು ಎಂದು ಟ್ರಂಪ್ ಓವಲ್ ಕಚೇರಿಯಲ್ಲಿ ಹೇಳಿದರು.

ಸುಂಕಗಳ ಶಕ್ತಿಯನ್ನು ಬಳಸದಿದ್ದರೆ, ಇನ್ನೂ ನಾಲ್ಕು ಯುದ್ಧಗಳು ನಡೆಯುತ್ತವೆ ಎಂದು ಅಮೆರಿಕ ಅಧ್ಯಕ್ಷರು ಹೇಳಿದರು.ನಾನು ಯುದ್ಧಗಳನ್ನು ನಿಲ್ಲಿಸಲು ಸುಂಕಗಳನ್ನು ಬಳಸುತ್ತೇನೆ.

ನೀವು ಭಾರತ ಮತ್ತು ಪಾಕಿಸ್ತಾನವನ್ನು ನೋಡಿದರೆ, ಅವರು ಅದನ್ನು ಮಾಡಲು ಸಿದ್ಧರಾಗಿದ್ದರು. ಏಳು ವಿಮಾನಗಳನ್ನು ಹೊಡೆದುರುಳಿಸಲಾಯಿತು. ಅವರು ಅದನ್ನು ಮಾಡಲು ಸಿದ್ಧರಾಗಿದ್ದರು. ಮತ್ತು ಅವರು ಪರಮಾಣು ಶಕ್ತಿಗಳು.ಮತ್ತು ನಾನು ಹೇಳಿದ್ದನ್ನು ನಿಖರವಾಗಿ ಹೇಳಲು ಬಯಸುವುದಿಲ್ಲ, ಆದರೆ ನಾನು ಹೇಳಿದ್ದು ತುಂಬಾ



ಪರಿಣಾಮಕಾರಿಯಾಗಿದೆ ಎಂದಿದ್ದಾರೆ.

ಭಾರತವು ಯಾವುದೇ ಮೂರನೇ ವ್ಯಕ್ತಿಯ ಹಸ್ತಕ್ಷೇಪವನ್ನು ನಿರಂತರವಾಗಿ ನಿರಾಕರಿಸಿದೆ.

ಏಪ್ರಿಲ್ 22 ರಂದು ನಡೆದ ಪಹಲ್ಗಾಮ್ ದಾಳಿಯಲ್ಲಿ 26 ನಾಗರಿಕರು ಸಾವನ್ನಪ್ಪಿದ ಪ್ರತೀಕಾರವಾಗಿ ಭಾರತವು ಮೇ 7 ರಂದು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು.

ನಾಲ್ಕು ದಿನಗಳ ತೀವ್ರವಾದ ಗಡಿಯಾಚೆಗಿನ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ ಸಂಘರ್ಷವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಒಪ್ಪಂದಕ್ಕೆ ಬಂದವು.

ಎರಡು ಮಿಲಿಟರಿಗಳ ಮಹಾನಿರ್ದೇಶಕರ ಮಿಲಿಟರಿ ಕಾರ್ಯಾಚರಣೆಗಳ (ಡಿಜಿಎಂಒ) ನಡುವಿನ ನೇರ ಮಾತುಕತೆಯ ನಂತರ ಪಾಕಿಸ್ತಾನದೊಂದಿಗಿನ ಯುದ್ಧವನ್ನು ನಿಲ್ಲಿಸುವ ಬಗ್ಗೆ ಒಪ್ಪಂದವನ್ನು ತಲುಪಲಾಗಿದೆ ಎಂದು ಭಾರತ ನಿರಂತರವಾಗಿ ಸಮರ್ಥಿಸಿಕೊಂಡಿದೆ. ಯಾವುದೇ ದೇಶದ ಯಾವುದೇ ನಾಯಕರು ಭಾರತವನ್ನು ಆಪರೇಷನ್ ಸಿಂಧೂರ್ ನಿಲ್ಲಿಸುವಂತೆ ಕೇಳಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸಂಸತ್ತಿನಲ್ಲಿ ಸ್ಪಷ್ಟಪಡಿಸಿದ್ದಾರೆ.

ಭಾರತ ಮತ್ತು ಪಾಕಿಸ್ತಾನ, ಕಾಂಬೋಡಿಯಾ ಮತ್ತು ಥೈಲ್ಯಾಂಡ್, ಕೊಸೊವೊ ಮತ್ತು ಸೆರ್ಬಿಯಾ, ಕಾಂಗೋ ಮತ್ತು ರುವಾಂಡಾ,

ಇಸ್ರೇಲ್ ಮತ್ತು ಇರಾನ್, ಈಜಿಪ್ ಮತ್ತು ಇಥಿಯೋಪಿಯಾ ಮತ್ತು ಅರ್ಮೇನಿಯಾ ಮತ್ತು ಅಜೆರ್ಬೈಜಾನ್ ಸೇರಿದಂತೆ ತಮ್ಮ ಆಡಳಿತದ ಎರಡನೇ ಅವಧಿಯಲ್ಲಿ ಏಳು ಯುದ್ಧಗಳನ್ನು ಕೊನೆಗೊಳಿಸಿದ್ದೇನೆ ಎಂದು ಟ್ರಂಪ್ ಹಲವಾರು ಬಾರಿ ಪುನರಾವರ್ತಿಸಿದ್ದಾರೆ.

ಮೇ 10 ರಿಂದ, ಟ್ರಂಪ್ ಸಾಮಾಜಿಕ ಮಾಧ್ಯಮದಲ್ಲಿ ದೀರ್ಘ

ರಾತ್ರಿಯ ನಂತರ ಭಾರತ ಮತ್ತು ಪಾಕಿಸ್ತಾನ ಪೂರ್ಣ ಮತ್ತು ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಘೋಷಿಸಿದಾಗಿನಿಂದ.

ವಾಷಿಂಗ್ಟನ್ ಮಧ್ಯಸ್ಥಿಕೆಯಲ್ಲಿ ನಡೆದ ಮಾತುಕತೆಗಳ ಬಗ್ಗೆ ಮಾತನಾಡುತ್ತಾ, ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷವನ್ನು ಇತ್ಯರ್ಥಗೊಳಿಸಲು ಸಹಾಯ ಮಾಡಿದೆ ಎಂದು ಅವರು ಈಗಾಗಲೆ ಹಲವು ಬಾರಿ ತಮ್ಮ ಹೇಳಿಕೆಯನ್ನು ಪುನರಾವರ್ತಿಸಿದ್ದಾರೆ.

# ಜಿಲ್ಲೆಗೆ 20 ಹೊಸ ಆರೋಗ್ಯ ಕ್ಷೇಮ ಕೇಂದ್ರ ಮಂಜೂರು ಟೆಂಡರ್ ಪ್ರಕ್ರಿಯೆ ಪೂರ್ಣ: ದಿನೇಶ್ ಗುಂಡೂರಾವ್

**ಚಿಕ್ಕಮಗಳೂರು, ಅ.7:** ಚಿಕ್ಕಮಗಳೂರು ಜಿಲ್ಲೆಗೆ ಸುಮಾರು 12.5 ಕೋಟಿ ರೂ. ವೆಚ್ಚದಲ್ಲಿ 20 ಹೊಸ ಆರೋಗ್ಯ ಕ್ಷೇಮ ಕೇಂದ್ರಗಳು ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆ ಸಹ ನಡೆದಿರುವುದಾಗಿ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಶ್ರೀ ದಿನೇಶ್ ಗುಂಡೂರಾವ್ ತಿಳಿಸಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಶ್ರಯದಲ್ಲಿ ಶೃಂಗೇರಿ ತಾಲ್ಲೂಕು ಅಡ್ಡಗದ್ದೆ ಗ್ರಾ.ಪಂ. ವ್ಯಾಪ್ತಿಯ ಬೆಳಂದೂರು ಗ್ರಾಮದ ಹೊನ್ನವಳ್ಳಿಯಲ್ಲಿ ಇಂದು ನೂರು ಹಾಸಿಗೆಯ ಸಾರ್ವಜನಿಕ ಆಸ್ಪತ್ರೆ ಕಟ್ಟಡದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶೃಂಗೇರಿ ತಾಲ್ಲೂಕಿಗೆ ತೀರಾ ಅಗತ್ಯವಿರುವ ಮಹತ್ವಪೂರ್ಣವಾದ ಯೋಜನೆ ಇದಾಗಿದ್ದು. ಒಟ್ಟು 37.65 ಕೋಟಿ ರೂ. ವೆಚ್ಚದ ಇಲ್ಲಿನ ಉದ್ದೇಶಿತ ಆಸ್ಪತ್ರೆ ಕಟ್ಟಡದ ಕಾಮಗಾರಿಯನ್ನು ಕ್ಷಿಪ್ರಗತಿಯಲ್ಲಿ ನಿರ್ವಹಿಸಿ ಮಳೆ ಬಿಡುವು ನೀಡಿದ ಮುಂದಿನ ಆರು ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರಲ್ಲದೆ, ಇನ್ನು ಹಲವು ಬೇಡಿಕೆಗಳಿಗೆ ಸ್ಪಂದಿಸುವುದಾಗಿ ಹೇಳಿದರು. ಈಗಾಗಲೇ ಬಾಳೆಹೊನ್ನೂರಿಗೆ 50 ಹಾಸಿಗೆಯ ಆಸ್ಪತ್ರೆ ಕಟ್ಟಡಕ್ಕೆ ಬೇಡಿಕೆ ಬಂದಿದ್ದು, ಈ ತಕ್ಷಣಕ್ಕೆ ಈ ಯೋಜನೆಗೆ ಅವಕಾಶವಾಗದಿದ್ದರೂ ಮುಂದಿನ ಆಯವ್ಯಯದಲ್ಲಿ ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಇಲ್ಲಿನ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾರ್ಯ ಮೊದಲೇ ಆರಂಭವಾಗಬೇಕಿತ್ತು. ಆದರೆ ಸ್ಥಳದ ಸಮಸ್ಯೆ ಹಾಗೂ ಮಳೆಗಾಲದ ಕಾರಣದಿಂದಾಗಿ ಕಾಮಗಾರಿ ಆರಂಭಕ್ಕೆ ಹಿನ್ನಡೆಯಾಗಿದೆ. ಗ್ರಾಮೀಣ ಪ್ರದೇಶದ ಜನಸಾಮಾನ್ಯರು ಮತ್ತು ಬಡಜನತೆಯ ಆರೋಗ್ಯ ರಕ್ಷಣೆಗೆ ಮೂಲ ಸೌಕರ್ಯದ ಅವಶ್ಯಕತೆ ಇದ್ದು, ಸರ್ಕಾರ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಾ ಬಂದಿದೆ. ಪ್ರಸ್ತುತ ಸನ್ನಿವೇಶದಲ್ಲಿ ಆರೋಗ್ಯಕ್ಕೆ ಹೆಚ್ಚಿನ ಪ್ರಾಧಾನ್ಯತೆ ನೀಡಬೇಕಾಗಿದ್ದರೂ ಖಾಸಗಿ ಆಸ್ಪತ್ರೆಗಳು ದುಬಾರಿಯಾಗಿ ಗ್ರಾಮೀಣ ಪ್ರದೇಶದ ಜನರಿಗೆ ತೀರಾ ಸಮಸ್ಯೆಯಾಗುತ್ತಿರುವುದರಿಂದ ಈ ಆಸ್ಪತ್ರೆಯ ಅವಶ್ಯಕತೆ ಇಲ್ಲಿಗೆ ಇತ್ತು. ಈ ನಿಟ್ಟಿನಲ್ಲಿ ಯೋಜನೆ ಕಾರ್ಯಗತವಾಗುವ ಕಾಲ ಸನ್ನಿಹಿತವಾಗಿದೆ ಎಂದರು.

ಆಸ್ಪತ್ರೆ ಕಟ್ಟಡದ ಶಂಕುಸ್ಥಾಪನೆಯನ್ನು ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ನೆರವೇರಿಸಿದರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಎರಡು ಬಾರಿ ಕಾರ್ಯಕ್ರಮ ನಿಗದಿಯಾಗಿತ್ತು. ಮಳೆಯ ಕಾರಣದಿಂದ ಮುಂದೂಡಲ್ಪಟ್ಟಿತ್ತು. ಇದೀಗ ಶಂಕುಸ್ಥಾಪನೆ ನೆರವೇರಿದ್ದು, ಶೀಘ್ರ ಕಾಮಗಾರಿ ಪೂರ್ಣಗೊಳ್ಳಲಿದೆ. ಆಸ್ಪತ್ರೆ ಕಟ್ಟಡಕ್ಕೆ ಸಂಬಂಧಿಸಿದಂತೆ

ಈ ಭಾಗದ ಬಹುದಿನಗಳ ಬೇಡಿಕೆಯಾದ ಒತ್ತುವರಿ ಸಮಸ್ಯೆ ಬಗೆಹರಿಯುವ ನಿರೀಕ್ಷೆ ಇದೆ. ರಸ್ತೆ ಮಲೆನಾಡಿನಲ್ಲಿ ಬಹಳಷ್ಟು ರಸ್ತೆಗಳು ಗುಂಡಿ ಬಿದ್ದಿವೆ. ವಸ್ತಾರೆಯಿಂದ ಶೃಂಗೇರಿಗೆ 95 ಕೋಟಿ ರೂ.ಗಳು, ಜಯಪುರದಿಂದ ಕೊಪ್ಪಕ್ಕೆ ರಸ್ತೆ ಅಗಲೀಕರಣವೂ ಸೇರಿದಂತೆ ಗುಂಡಿ ಮುಚ್ಚಲು 11 ಕೋಟಿ ರೂ.ಗಳು, ಕೋಲ್ಲುಕೊಪ್ಪದಿಂದ ಕೊಪ್ಪಕ್ಕೆ ಸುಮಾರು 19.5 ಕೋಟಿ ರೂ.ಗಳನ್ನು ಉಸ್ತುವಾರಿ ಸಚಿವರು ಒದಗಿಸಿದ್ದಾರೆ. ಮಳೆ ಮುಗಿದ ಬಳಿಕ ಈ ಕಾಮಗಾರಿ ನಿರ್ವಹಿಸಲಾಗುವುದು.

# ತಳ ಸಮುದಾಯದ ಅಭಿವೃದ್ಧಿಗೆ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಪೂರಕ : ಶಾಸಕ ಶ್ರೀನಿವಾಸ್



**ತರೀಕೆರೆ:** ಹಿಂದುಳಿದ ವರ್ಗಗಳು ಹಾಗೂ ತಳ ಸಮುದಾಯಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಅನಿವಾರ್ಯವಾಗಿದೆ ಎಂದು ಶಾಸಕ ಜಿ.ಎಚ್. ಶ್ರೀನಿವಾಸ್ ಹೇಳಿದರು.

ಅವರು ಪಟ್ಟಣದ ವಾರ್ಡ್ ಸಂಖ್ಯೆ 17 ರಲ್ಲಿನ ಖಾಜಿ ಬೀದಿಯ ಜಾಮೀಯ ಮಸೀದಿ ಆವರಣದಲ್ಲಿ ಏರ್ಪಡಿಸಿದ್ದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ರಸ್ತೆ ಹಾಗೂ ಹಜ್ರತ್ ಸಲಾವುದ್ದೀನ್ ಷಾ ಖಾದ್ರಿ ದರ್ಗಾದವರೆಗೆ ಸಿ.ಸಿ. ರಸ್ತೆ ಕಾಮಗಾರಿ ಹಾಗೂ ಈದ್ ಮೀಲಾದ್ ಅಂಗವಾಗಿ ಶಂಕರ ಕಣ್ಣಿನ ಆಸ್ಪತ್ರೆ ವತಿಯಿಂದ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರ ಮತ್ತು ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಜಮೀರ್ ಅಹಮದ್ ಖಾನ್ ನಮ್ಮ ಕ್ಷೇತ್ರಕ್ಕೆ ಹೆಚ್ಚು ಅನುದಾನ ನೀಡಿದ್ದಾರೆ. ರಸ್ತೆ, ಕುಡಿಯುವ ನೀರು ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.


ಪುರಸಭೆ ಅಧ್ಯಕ್ಷ ವಸಂತ ಕುಮಾರ್ ಮಾತನಾಡಿ, ಪಟ್ಟಣದಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳು ಶಾಸಕರ ಸಹಕಾರ ಹಾಗೂ ಪುರಸಭೆ ನಿಧಿಯಲ್ಲಿ ಕೈಗೊಳ್ಳಲಾಗಿದೆ. ನಾಗರೀಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಪುರಸಭೆ ಆಡಳಿತ ಬದ್ಧವಾಗಿದೆ ಎಂದು ಹೇಳಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಯು. ಫಾರೂಕ್ ಮಾತನಾಡಿ, ಕಾಂಗ್ರೆಸ್ ಸರ್ಕಾರದ ಆಡಳಿತದ ಅವಧಿಯಲ್ಲಿ ದಲಿತ ಮತ್ತು ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ವಿಶೇಷ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈ ವಾರ್ಡಿನ ಪುರಸಭಾ ಸದಸ್ಯ ಟಿ.ದಾದಾಪೀರ್ ಮಾತನಾಡಿ, ಶಾಸಕರು ಖಬರಸ್ತಾನ ಹಾಗೂ ಅಲ್ಪಸಂಖ್ಯಾತರು ವಾಸಿಸುವ ವಾರ್ಡ್‌ಗಳಲ್ಲಿ ವಿಶೇಷ ಅನುದಾನ ತಂದು ಕೆಲಸ ಮಾಡುತ್ತಿದ್ದಾರೆ. 17ನೇ ವಾರ್ಡ್‌ನಲ್ಲಿ ಅಂಗನವಾಡಿಗೆ ಪುರಸಭೆ ನಿವೇಶನ ಒದಗಿಸಿದೆ. ಅನುದಾನ ದೊರಕಿಸಿ ಕಟ್ಟಡ ನಿರ್ಮಾಣ ಮಾಡಲು ಸಹಕರಿಸಬೇಕು. ಪ್ರವಾದಿಗಳ ಹೆಸರಿನಲ್ಲಿ ಮತ್ತು ಸಂತರಾದ ಹಜ್ರತ್ ಗೌಸುಲ್ ಅಜಂ ದಸ್ತಗೀರ್‌ರವರ ಜನ್ಮದಿನಾಚರಣೆ ಪ್ರಯುಕ್ತ ಸಾಮರಸ್ಯ ನಿರ್ಮಾಣಕ್ಕಾಗಿ ಆರೋಗ್ಯ ಶಿಬಿರಗಳ ಆಯೋಜಿಸಲಾಗಿದೆ ಎಂದು ಹೇಳಿದರು.

# ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ದೇವಾಲಯಗಳ ನಿರ್ಮಾಣಕ್ಕೆ ನೆರವು : ತಮ್ಮಯ್ಯ

**ಚಿಕ್ಕಮಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4 ಕೋಟಿ ವಿಶೇಷ ಅನುದಾನವನ್ನು ಕ್ಷೇತ್ರಕ್ಕೆ ನೀಡಿದ್ದು ಅದರಲ್ಲಿ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ದೇವಾಲಯಗಳ ನಿರ್ಮಾಣಕ್ಕೆ ನೆರವು ನೀಡುತ್ತಿರುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ಹೇಳಿದರು.



ತಾಲೂಕಿನ ಮೂಗ್ತಿಹಳ್ಳಿ ಗ್ರಾಮದಲ್ಲಿ ನಿರ್ಮಿಸುತ್ತಿರುವ ಶ್ರೀ ಕೆಂಚರಾಯಸ್ವಾಮಿ ದೇವಸ್ಥಾನದ ಜೀರ್ಣೋದ್ದಾರಕ್ಕೆ ಶಾಸಕರ ನಿಯಿಂದ 5 ಲಕ್ಷ ರೂ.ಗಳ ಚೆಕ್ಕನ್ನು ದೇವಾಸ್ಥಾನ ಅಭಿವೃದ್ಧಿ ಸಮಿತಿಗೆ ಹಸ್ತಾಂತರಿಸಿ ಅವರು ಮಾತನಾಡಿದರು.

ಪ್ರಾಯಶಃ ನಮ್ಮ ಸರಕಾರ ಅಧಿಕಾರಕ್ಕೆ ಬಂದಮೇಲೆ ನಮ್ಮ ಘೋಷಣೆ ಜನರಿಂದ ಆಯ್ಕೆಯಾಗಿ ಜನರಿಗೋಸ್ಕರ ಕೆಲಸ ಮಾಡುವುದಾಗಿದೆ. ಜನರ ಮನೆ ಬಾಗಿಲಿಗೆ ಈಗಾಗಲೇ ಸರಕಾರದ ಗ್ಯಾರಂಟಿ ಯೋಜನೆಯ ಸವಲತ್ತುಗಳು ತಲುಪುತ್ತಿವೆ. 10 ಕಿಲೋ ಅಕ್ಕಿ, ಉಚಿತ ಕರೆಂಟ್, ಬಸ್ ಫ್ರೀ ಮಾಡಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಸರಕಾರದ ಸೌಲಭ್ಯಗಳು ಎಲ್ಲ ಸಮುದಾಯದ ಬಡಜನರಿಗೆ ತಲುಪಿಸುತ್ತಿದ್ದೇವೆ ಎಂದರು.

ಮುಖ್ಯಮಂತ್ರಿಗಳು 4 ಕೋಟಿ ವಿಶೇಷ ಅನುದಾನವನ್ನು ನನ್ನ ಕ್ಷೇತ್ರಕ್ಕೆ ಕೊಟ್ಟಿದ್ದಾ-ರೆ. ಕ್ಷೇತ್ರದಲ್ಲಿ 416 ಹಳ್ಳಿಗಳಿದ್ದರೂ ಕೆಲವು ಕಡೆ ಬಡವರು ಕಷ್ಟಪಟ್ಟು ದೇವಸ್ಥಾನ ನಿರ್ಮಿಸುತ್ತಿದ್ದಾರೆ. ಅಂತಹವರಿಗೆ 5-10 ಲಕ್ಷ ಕೊಡುವ ಕೆಲಸ ಮಾಡುತ್ತಿದ್ದೇವೆ. ಆ ಹಣ ಪಡೆಯಲು ನಿರ್ಮಿತಿ ಕೇಂದ್ರ, ಲ್ಯಾಂಡ್ ಆರ್ಮಿಗೆ ಅಲೆಯಬಾರದು ಎಂಬ ಕಾರಣಕ್ಕೆ ಮನೆ ಬಾಗಿಲಿಗೆ ಹಣತಲುಪಿಸುತ್ತಿದ್ದೇವೆ. ಊರಿನ ಅಭಿವೃದ್ಧಿ ಕೆಲಸಗಳನ್ನು ಆದ್ಯತೆ ಮೇರೆಗೆ ಮಾಡಲಾಗುವುದು ಎಂದು ಹೇಳಿದರು.

ಮಹಿಳೆಯರು ಗೃಹಲಕ್ಷ್ಮಿ ಯೋಜನೆ ಅಡಿ 1 ಸಾವಿರ ರೂ. ಸ್ವಂತಕ್ಕೆ ಬಳಸಿಕೊಂಡರೆ, ಉಳಿದ 1 ಸಾವಿರ ಮಕ್ಕಳ, ಮೊಮ್ಮಕ್ಕಳ ಶಿಕ್ಷಣಕ್ಕೆ ಮೀಸಲಿಡಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಮನವಿ ಮಾಡಿದರು.

## ನಿಗಮ ಮಂಡಳಿಯಲ್ಲಿ ಆರ್.ಕೆ.ಸರ್ದಾರ್‌ಗೆ ದ್ರೋಹ

# ಸಿಎಂ, ಡಿಸಿಎಂ ನಡೆ ವಿರೋಧಿಸಿ ಜಿಲ್ಲಾ ಕಾಂಗ್ರೆಸ್ ಕಚೇರಿ ಎದುರು ಪ್ರತಿಭಟನೆ

**ಚಿತ್ರದುರ್ಗ:** ಕಳೆದ 38 ವರ್ಷಗಳಿಂದಲೂ ಕಾಂಗ್ರೆಸ್ ಪಕ್ಷದಲ್ಲಿ ಪ್ರಾಮಾಣಿಕವಾಗಿ ದುಡಿಯುತ್ತ ಪಕ್ಷ ಸಂಘಟನೆಯಲ್ಲಿ ತೊಡಗಿರುವ ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್‌ಗೆ ನಿಗಮ ಮಂಡಳಿಯಲ್ಲಿ ಸ್ಥಾನಮಾನ ನೀಡದೆ ದ್ರೋಹವೆಸಗಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡೆಯನ್ನು ವಿರೋಧಿಸಿ ಎಲ್ಲಾ ಜಾತಿ ವರ್ಗದ ಅವರ ಅಪಾರ ಅಭಿಮಾನಿಗಳು ಜಿಲ್ಲಾ ಕಾಂಗ್ರೆಸ್ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.



ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಆಗಮಿಸಿದ ಆರ್.ಕೆ.ಸರ್ದಾರ್ ಅಭಿಮಾನಿಗಳು ರಾಜ್ಯ ಸರ್ಕಾರದ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಮಧ್ಯ ಕರ್ನಾಟಕದ ಅಲ್ಪಸಂಖ್ಯಾತ ನಾಯಕ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಪ್ರಬಲ ಆಕಾಂಕ್ಷಿ ಆರ್.ಕೆ.ಸರ್ದಾರ್‌ಗೆ 2013-15 ರಲ್ಲಿ ನಡೆದ ಚುನಾವಣೆಯಲ್ಲಿ ಟಿಕೇಟ್ ನೀಡದೆ ವಂಚಿಸಲಾಯಿತು. ಸಿದ್ದರಾಮಯ್ಯನವರು ಚಿತ್ರದುರ್ಗಕ್ಕೆ ಆಗಮಿಸಿದ್ದಾಗ ಆರ್.ಕೆ.ಸರ್ದಾರ್‌ರವರಿಗೆ ಟಿಕೇಟ್ ನೀಡುವುದಾಗಿ ನಂಬಿಸಿ ಕೈಕೊಟ್ಟಿರುವುದನ್ನು ನಾವುಗಳು ಸಹಿಸುವುದಿಲ್ಲ. ಮುಂದೆ ನಡೆಯುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲಬೇಕಿದೆ ಎನ್ನುವುದನ್ನು ಪಕ್ಷದ ನಾಯಕರುಗಳು ಮನದಲ್ಲಿಟ್ಟುಕೊಳ್ಳಬೇಕು. ಅಲ್ಪಸಂಖ್ಯಾತರನ್ನು ಕೇವಲ ಮತ ಬ್ಯಾಂಕನ್ನಾಗಿ ಮಾಡಿಕೊಂಡರೆ ಮುಂದಿನ ಚುನಾವಣೆಯಲ್ಲಿ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕಾಗುತ್ತದೆಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಕಾರ್ಯದರ್ಶಿ ಸಿ.ಆರ್.ಅಬ್ದುಲ್ ಖಯ್ಯೂಂ ಮಾತನಾಡಿ ಪಕ್ಷದಲ್ಲಿ ಯಾವುದೇ ಅಧಿಕಾರ ಸ್ಥಾನಮಾನ ಸಿಗದಿದ್ದರೂ ಎಂದಿಗೂ ಪಕ್ಷಕ್ಕೆ ದ್ರೋಹ ಮಾಡದೆ ನಿಷ್ಟಾವಂತರಾಗಿ ಇಂದಿಗೂ ಉಳಿದುಕೊಂಡಿರುವ ಅಲ್ಪಸಂಖ್ಯಾತರ ನಾಯಕ ಆರ್.ಕೆ.ಸರ್ದಾರ್‌ರವರಿಗೆ ರಾಜ್ಯ ಮಟ್ಟದ ಉನ್ನತ ಸಚಿವ ಸಂಪುಟ ದರ್ಜೆಯ ಸ್ಥಾನಮಾನ ನೀಡಿ ಅಲ್ಪಸಂಖ್ಯಾತರಿಗೆ ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ಗಂಭೀರವಾಗಿ ಚಿಂತಿಸಬೇಕು. ಇಲ್ಲವಾದಲ್ಲಿ ಪರಿಣಾಮ ಎದುರಿಸಬೇಕಾಗುತ್ತದೆಂದು ಎಚ್ಚರಿಸಿದರು.

ನಿವೃತ್ತ ಡಿ.ವೈ.ಎಸ್ಪಿ. ಅಬ್ದುಲ್‌ರೆಹಮಾನ್, ಯಾಸಿನ್, ಮೆಹಬೂಬ್‌ಖಾನ್, ಜಿಲ್ಲಾ ಕಾಂಗ್ರೆಸ್ ರೈತ ಸಂಘದ ಶಿವಲಿಂಗಪ್ಪ, ಆರ್.ಕೆ.ನಯಾಜ್, ದಾದಾಪೀರ್, ರಘು

ಧನಂಜಯ, ಪ್ರಕಾಶ್, ಶ್ರೀನಿವಾಸ್ ಇನ್ನು ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಬಿಗ್ ಬಾಸ್ ಶೋಗೆ ಬಿಗ್ ಸಂಕಷ್ಟ, ಪ್ರತಿಭಟನೆ, ಪೊಲೀಸ್ ಅನುಮತಿಯೂ ಪಡೆದಿಲ್ಲ




**ಬೆಂಗಳೂರು:** ಕನ್ನಡ ಬಿಗ್ ಬಾಸ್ ರಿಯಾಲಿಟಿ ಶೋಗೆ ಸಂಕಷ್ಟ ಎದುರಾಗಿದೆ. ಬಿಗ್ ಬಾಸ್ ರಿಯಾಲಿಟಿ ಶೋ ಸ್ಥಗಿತಗೊಳಿಸುವಂತೆ ಕನ್ನಡಪರ ಸಂಘಟನೆಯೊಂದು ಬಿಗ್ ಬಾಸ್ ಸೆಟ್ ಬಳಿ ಪ್ರತಿಭಟನೆ ಆರಂಭಿಸಿದೆ. ಇದಲ್ಲದೆ, ಪೊಲೀಸ್ ಇಲಾಖೆಯಿಂದ ಅನುಮತಿ ಪಡೆಯದೇ ಬಿಗ್ ಬಾಸ್ ನಡೆಸುತ್ತಿದ್ದಾರೆ ಎಂದು ದೂರಲಾಗಿದೆ. ನಿನ್ನೆ, ಬಗ್ ಬಾಸ್ ಆಯೋಜಕರಿಗೆ ಮಾಲಿನ್ಯ ನಿಯಂತ್ರಣ ಮಂಡಳಿ ನೋಟಿಸ್ ಜಾರಿ ಮಾಡಿತ್ತು. ಅನಧಿಕೃತ ಎಂದು ವಿದ್ಯುತ್ ಸಂಪರ್ಕ ಕಡಿತಕ್ಕೆ ಸಹ ಸೂಚನೆ ನೀಡಲಾಗಿತ್ತು.

35 ಎಕರೆ ಪ್ರದೇಶದಲ್ಲಿರುವ ಜಾಲಿವುಡ್ ಸ್ಟುಡಿಯೋ ರಾಮನಗರ ತಾಲೂಕಿನ ಬಿಡದಿಯಲ್ಲಿದ್ದು, ಇಲ್ಲಿ ಬಿಗ್ ಬಾಸ್ ಶೂಟಿಂಗ್ ನಡೆಯುತ್ತಿದೆ. ರಾಜ್ಯ ನೀರು ಸಂಸ್ಕರಣ ಘಟಕದಿಂದ ಪರವಾನಗಿ ಪಡೆಯದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಿಗ್ ಬಾಸ್ ಶೋ ಮನೆ ಬಂದ್ ಮಾಡುವಂತೆ ನಿನ್ನೆ ನೋಟಿಸ್ ನೀಡಿತ್ತು. ಸ್ಟುಡಿಯೋಗೆ ಬೀಗ ಹಾಕಬೇಕು ಎಂದು ಹಿರಿಯ ಪರಿಸರಾಧಿಕಾರಿ ವಸುದೇವ ಅವರು ಜಿಲ್ಲಾಧಿಕಾರಿಗಳಿಗೆ ವರದಿ ನೀಡಿದ್ದಾರೆ.

# ಮತ್ತೊಮ್ಮೆ ಲಿಂಗಾಯತ ಪ್ರತ್ಯೇಕ ಧರ್ಮದ ಬೇಡಿಕೆ ಹುಟ್ಟುಹಾಕಿದ ಬಸವ ಸಾಂಸ್ಕೃತಿಕ ಅಭಿಯಾನ

**ಬೆಂಗಳೂರು:** ಬೆಂಗಳೂರಿನಲ್ಲಿ ಭಾನುವಾರ ನಡೆದ ಬಸವ ಸಾಂಸ್ಕೃತಿಕ ಅಭಿಯಾನಕ್ಕೆ ಮಹಾಸಭಾವನ್ನು ಅಧಿಕೃತವಾಗಿ ಆಹ್ವಾನಿಸಲಾಗಿಲ್ಲ, ನಾವು ಬಸವ ವಿರೋಧಿಗಳೇ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ಕಾರ್ಯದರ್ಶಿ ರೇಣುಕಾ ಪ್ರಸನ್ನ ದೂರಿದರು.

ಪ್ರತ್ಯೇಕ ಧರ್ಮದ ಸ್ಥಾನಮಾನಕ್ಕಾಗಿ ಹಲವು ಸ್ವಾಮೀಜಿಗಳು ಪಟ್ಟು ಹಿಡಿದಿದ್ದು, ಸಮೀಕ್ಷೆ ಸಮಯದಲ್ಲಿ ಲಿಂಗಾಯತ ಪ್ರತ್ಯೇಕ ಧರ್ಮ ಎಂದು ಬರೆಸಲೂ ಕರೆ ನೀಡಿದ್ದಾರೆ. ಇದಕ್ಕೆ ಪೂರಕವೆಂಬಂತೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದಿದ್ದ ಬಸವ ಸಾಂಸ್ಕೃತಿಕ ಅಭಿಯಾನದ ಸಮಾರೋಪ ಸಮಾರಂಭದಲ್ಲಿಯೂ ಇದೇ ವಿಚಾರ ಪ್ರತಿಧ್ವನಿಸಿದೆ. 30 ಜಿಲ್ಲೆಗಳಲ್ಲಿ ಬೆಂಗಳೂರು ಅಭಿಯಾನ ಮತ್ತು ಬಸವ ಅಭಿಯಾನಗಳ ಸಂಘಟಕರಲ್ಲಿ ಒಬ್ಬರಾದ ಜಗತಿಕ ಲಿಂಗಾಯತ ಮಹಾಸಭಾದ ಮುಖ್ಯಸ್ಥರಾಗಿರುವ ಮಾಜಿ ಐಎಎಸ್ ಅಧಿಕಾರಿ ಎಸ್‌ಎಂ ಜಾಮ್‌ದಾರ್, "ಬಿಎಸ್ ಯಡಿಯೂರಪ್ಪ, ಜಗದೀಶ್ ಶೆಟ್ಟರ್ ಮತ್ತು ಬಸವರಾಜ ಬೊಮ್ಮಾಯಿ ಸೇರಿದಂತೆ ಮೂವರು ಮಾಜಿ ಮುಖ್ಯಮಂತ್ರಿಗಳನ್ನು ನಾವು ಆಹ್ವಾನಿಸಲಿಲ್ಲ ಏಕೆ-ಂದರೆ ಅವರು ತಮ್ಮ ನಿಲುವನ್ನು ಸ್ಪಷ್ಟಪಡಿಸಿದ್ದಾರೆ. ವೀರಶೈವ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಮತ್ತು ಸಚಿವ ಈಶ್ವರ್ ಖಂಡ್ರೆ ಅವರನ್ನು ಸಹ ನಾವು ಆಹ್ವಾನಿಸಲಿಲ್ಲ, ಏಕೆಂದರೆ ಅವರು ಸುಮಾರು 10 ದಿನಗಳ ಹಿಂದೆ ರಂಭಾಪುರಿ ಮಠದಲ್ಲಿ ತಮ್ಮ ನಿಲುವನ್ನು ಸ್ಪಷ್ಟಪಡಿಸಿದ್ದರು. ಹೀಗಾಗಿ ನಾವು ಬಸವ ತತ್ವದ ಪರವಾಗಿ ನಿಲ್ಲುತ್ತೇವೆ, ಬಸವಣ್ಣನವರ ಮೇಲೆ ನಂಬಿಕೆ ಇಲ್ಲದ ಜನರನ್ನು ಆಹ್ವಾನಿಸಲು ನಾವು



ಮೂರ್ಖರಲ್ಲ ಎಂದಿದ್ದಾರೆ.

ಬಸವಣ್ಣನವರ ಸಾಂಸ್ಕೃತಿಕ ಆಚರಣೆಯಾಗಿ ಪ್ರಾರಂಭವಾದದ್ದು ನಂಬಿಕೆ, ಗುರುತು ಸೇರಿದವರ ಪ್ರತಿಪಾದನೆಯಾಗಿ ವಿಕಸನಗೊಂಡಿತು. ಭಾಗವಹಿಸಿದ ಸಾವಿರಾರು ಜನರು ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಲಿಂಗಾಯತವನ್ನು ತಮ್ಮ ಧರ್ಮವೆಂದು ಉಲ್ಲೇಖಿಸಿದ್ದಾರೆ ಎಂದು ಪ್ರತಿಪಾದಿಸಿದರು. ಈ ಆಂದೋಲನವನ್ನು ಜಾಗತಿಕ ಲಿಂಗಾಯತ ಮಹಾಸಭಾ, ಬಸವ ದಳ ಮತ್ತು ಹಲವಾರು ಇತರ ಸಣ್ಣ ಬಸವ ಪರ ಸಂಘಟನೆಗಳು ಬೆಂಬಲಿಸಿದವು.

ನಾನು ಜಾತಿ ಜನಗಣತಿಯಲ್ಲಿ ಲಿಂಗಾಯತ ಎಂದು ಬರೆಯುತ್ತೇನೆ ಎಂಬ ಕಾರಣದೊಂದಿಗೆ ದೀರ್ಘಕಾಲ ಗುರುತಿಸಿಕೊಂಡಿದ್ದ ಅವರ ಸಾರ್ವಜನಿಕ ಪ್ರತಿಜ್ಞೆಯನ್ನು ಧಿಕ್ಕಾರದ ಕ್ರಿಯೆಯಾಗಿ ಓದಲಾಯಿತು, ರಾಜಕೀಯ ಪ್ರತಿಕ್ರಿಯೆಯ ಬಗ್ಗೆ ಎಚ್ಚರದಿಂದಿದ್ದ ಅನೇಕರಲ್ಲಿ ವಿಶ್ವಾಸವನ್ನು ಪುನರುಜ್ಜೀವನಗೊಳಿಸಲಾಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭಾಗವಹಿಸುವಿಕೆ ಕಾರ್ಯಕ್ರಮಕ್ಕೆ ಹೆಚ್ಚಿನ ಮಹತ್ವವನ್ನು ನೀಡಿತು.

ತೆರೆಮರೆಯಲ್ಲಿ, ಡಜನ್ಗಟ್ಟಲೆ ಸಮುದಾಯದ ನಾಯಕರು ಲಿಂಗಾಯತ ಗುರುತಿನ ಸಂದೇಶವನ್ನು ಸದ್ದಿಲ್ಲದೆ ಪ್ರಚಾರ ಮಾಡುತ್ತಿದ್ದಾರೆ. ಜಾಮ್ದಾರ್ ಮತ್ತು ಇತರ ಲಿಂಗಾಯತ ವಿದ್ವಾಂಸರು ಮತ್ತು ಸಮುದಾಯದ ನಾಯಕರು ಗಮನಿಸಿದಂತೆ, "ಬಸವ ಸಾಂಸ್ಕೃತಿಕ ಅಭಿಯಾನವು ಕೇವಲ ಒಂದು ಘಟನೆಯಾಗಿರಲಿಲ್ಲ. ಆಧ್ಯಾತ್ಮಿಕ ದಂಗೆಯಾಗಿತ್ತು. ವಾಸ್ತವವಾಗಿ, ಅಭಿಯಾನವು ಲಿಂಗಾಯತ ಧರ್ಮ ಚಳುವಳಿಯನ್ನು ಪುನರುಜ್ಜೀವನಗೊಳಿಸಿದೆ, ಹೊಸ ಅನುರಣನವನ್ನು ಕಂಡುಕೊಂಡಿದೆ.

# ಎಚ್.ಡಿ ದೇವೇಗೌಡರ ಆರೋಗ್ಯದಲ್ಲಿ ಏರುಪೇರು; ಆಸ್ಪತ್ರೆಗೆ ದಾಖಲು

**ಬೆಂಗಳೂರು:** ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡ (ಊಆ ಆಜತಜ ಉಠತಿಜಚಿ) ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಚಿಕಿತ್ಸೆಗಾಗಿ ನಗರದ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ವೈದ್ಯರು ಚಿಕಿತ್ಸೆ ಮುಂದುವರಿಸಿದ್ದು, ಸದ್ಯ ದೇವೇಗೌಡರ ಆರೋಗ್ಯದಲ್ಲಿ ಚೇತರಿಕೆ ಕಂಡುಬಂದಿದೆ ಎನ್ನಲಾಗಿದೆ. ದೇವೇಗೌಡರ ಆರೋಗ್ಯದ ಬಗ್ಗೆ ಶೀಘ್ರದಲ್ಲಿಯೇ ಕುಟುಂಬ ಅಥವಾ ಆಸ್ಪತ್ರೆಯಿಂದ ಅಧಿಕೃತ ಮಾಹಿತಿ ಹೊರಬೀಳುವ ಸಾಧ್ಯತೆ ಇದೆ.

ಕಳೆದ ವರ್ಷ ಫೆಬ್ರವರಿಯಲ್ಲಿ ತೀವ್ರ ಜ್ವರ, ಕೆಮ್ಮು ಮತ್ತು ಉಸಿರಾಟದ ಸಮಸ್ಯೆ ಹಿನ್ನೆಲೆಯಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರನ್ನು ಇದೇ ಮಣಿಪಾಲ ಆಸ್ಪತ್ರೆಗೆ ದಾಖಲಾಗಿದ್ದರು. ಇದೀಗ ಆರೋಗ್ಯದಲ್ಲಿ ಏರುಪೇರಾಗಿದ್ದರಿಂದ ಆಸ್ಪತ್ರೆಗೆ ದಾಖಲಾಗಿದ್ದಾರೆ.

# ತಾಲ್ಲೂಕು ಆಸ್ಪತ್ರೆಗಳಿಗೆ ತಜ್ಞವೈದ್ಯರ ನೇಮಕಕ್ಕೆ ತೀರ್ಮಾನ : ಸಚಿವ ದಿನೇಶ್ ಗುಂಡೂರಾವ್

**ಚಿಕ್ಕಮಗಳೂರು, ಅ.7:** ರಾಜ್ಯದ ತಾಲ್ಲೂಕು ಆಸ್ಪತ್ರೆಗಳಿಗೆ ತಜ್ಞ ವೈದ್ಯರುಗಳನ್ನು ಕಡ್ಡಾಯವಾಗಿ ನೇಮಕ ಮಾಡಲು ಸರ್ಕಾರ ತೀರ್ಮಾನ ಕೈಗೊಂಡಿ-ದ್ದು, ತಾಯಿ ಮಗುವಿನ ಆರೋಗ್ಯಕ್ಕೆ ಆದ್ಯತೆ ನೀಡಿದೆ ಎಂದು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್ ತಿಳಿಸಿದರು.

ಕೊಪ್ಪ ಪಟ್ಟಣದಲ್ಲಿ 14 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಾಣಗೊಂಡ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ತಾಲ್ಲೂಕು ಮಟ್ಟದ ಸಾರ್ವಜನಿಕ ಆರೋಗ್ಯ ಪ್ರಯೋಗ ಶಾಲೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಇಂದು ಮಾತನಾಡಿದ ಅವರು, ತಲಾ ಇಬ್ಬರಂತೆ ಸ್ತ್ರೀರೋಗ ತಜ್ಞರು, ಮಕ್ಕಳ ತಜ್ಞರು, ಅರಿವಳಿಕೆ ತಜ್ಞರು, ಒಬ್ಬರು ರೆಡಿಯಾಲಾಜಿಸ್ಟ್ ಅನ್ನು ನೇಮಿಸಿಕೊಳ್ಳಲಾಗುವುದು. ಜನರಿಗೆ ಅಗತ್ಯ ಸೇವೆ ಪೂರೈಸಲು ಸರ್ಕಾರ ಬದ್ಧವಾಗಿದ್ದು, ಎಲ್ಲ ಕ್ರಮಗಳನ್ನು ಕೈಗೊಂಡಿದೆ ಎಂದರು.



ಚುನಾವಣೆ ಪೂರ್ವದಲ್ಲಿ ಕೊಟ್ಟ ಮಾತಿನಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗ್ಯಾರಂಟಿ ಯೋಜನೆಯನ್ನು ಕೇವಲ ಮೂರು ತಿಂಗಳಲ್ಲಿ ಅನುಷ್ಠಾನಕ್ಕೆ ತಂದರು. ಸರ್ಕಾರ ನುಡಿದಂತೆ ನಡೆದಿದ್ದು, ದೇಶದ ಜನರಿಗೆ ಅಚ್ಚರಿಯಾಗಿದೆ. ಸಾಮಾಜಿಕ ನ್ಯಾಯದ ಬಗ್ಗೆ ಬದ್ಧತೆ ಇದೆ. ಮಹಿಳಾ ಸಬಲೀಕರಣಕ್ಕೆ ಒತ್ತು ಕೊಟ್ಟಿದೆ. ಗ್ಯಾರಂಟಿ ಯೋಜನೆಯಿಂದ ಮಹಿಳೆಯರಿಗೆ ಆತ್ಮ ಗೌರವ ಸಿಕ್ಕಿದೆ ಎಂದರು.

100 ಹಾಸಿಗೆಗಳ ಆಸ್ಪತ್ರೆ ಮಂಜೂರು ಮಾಡಿ ಶೃಂಗೇರಿಯ ಋಣ ತೀರಿಸುವ ಕೆಲಸ ಮಾಡಿದ್ದು, ಇನ್ನು ಆರೇಳು ತಿಂಗಳಲ್ಲಿ ಈ ಕಾಮಗಾರಿ ಪೂರ್ಣಗೊಳ್ಳಬೇಕಿದ್ದು, ನಮ್ಮ ಸರ್ಕಾರದ ಅವಧಿಯಲ್ಲಿಯೇ ಉದ್ಘಾಟನೆಯಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು. ಇಂದು ವಾಲ್ಮೀಕಿ ಜಯಂತಿ, ರಾಮಾಯಣವು ಭಾರತದ ಬೆಳವಣಿಗೆಗೆ ಸ್ಫೂರ್ತಿಯಾಗಿದೆ ಎಂದು ಈ ಸಂದರ್ಭದಲ್ಲಿ ಸ್ಮರಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ನೂತನ ಆಸ್ಪತ್ರೆ ಉದ್ಘಾಟಿಸಿ ಮಾತನಾಡಿ, ವಾಲ್ಮೀಕಿ ಬರೆದ ರಾಮಾಯಣವನ್ನು ಭಾರತ ಮಾತ್ರವಲ್ಲ ಇಡೀ ಪ್ರಪಂಚವೇ ಶ್ಲಾಘಿಸುತ್ತದೆ. ಅಯೋಧ್ಯೆಯ ರಾಮನ ಆದರ್ಶ ಕೊಟ್ಟ ಮಾತನ್ನು ಪಾಲಿಸಲು ಮಾತ್ರವೇ ಹೊರತು ಅಧಿಕಾರಕ್ಕಾಗಿ ಅಲ್ಲ. ರಾಮಾಯಣ ಹಿಂದೂಗಳಿಗೆ ಮಾತ್ರವಲ್ಲ, ಎಲ್ಲಾ ಧರ್ಮದವರಿಗೂ ದಾರಿದೀಪ ಎಂದು ಹೇಳಿದರು.

ಶಾಸಕ ಟಿ.ಡಿ.ರಾಜೇಗೌಡ ಮಾತನಾಡಿ, 'ಗ್ಯಾರಂಟಿ ಯೋಜನೆಗೆ 50-60 ಸಾವಿರ ಕೋಟಿ ರೂ. ಕೊಟ್ಟರೂ ರಾಜ್ಯ ಸರ್ಕಾರ ಅಭಿವೃದ್ಧಿ ಕೆಲಸದಲ್ಲಿ ಹಿಂದೆ ಬಿದ್ದಿಲ್ಲ. ಅಭಿವೃದ್ಧಿ ನಿಟ್ಟಿನಲ್ಲಿ ರೂ.14.69 ಕೋಟಿ ವೆಚ್ಚದಲ್ಲಿ ಇಲ್ಲಿ ತಾಯಿ, ಮಕ್ಕಳ ಆಸ್ಪತ್ರೆ ನಿರ್ಮಾಣವಾಗಿದೆ. ಆಸ್ಪತ್ರೆ ಮುಂದುವರಿದ ಅಭಿವೃದ್ಧಿ ಕಾಮಗಾರಿಗೆ ಸಚಿವರನ್ನು ಕೇಳಿದ ಕೂಡಲೇ ರೂ.1.34 ಕೋಟಿ ಮಂಜೂರು ಮಾಡಿದ್ದಾರೆ. ಸರ್ಕಾರ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚು ಒತ್ತುಕೊಟ್ಟು ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಪ್ರಯುಕ್ತ ವಾಲ್ಮೀಕಿ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್, ಅಪರ ಜಿಲ್ಲಾಧಿಕಾರಿ ನಾರಾಯಣ ರಡ್ಡಿ ಕನಕರಡ್ಡಿ, ಉಪ ವಿಭಾಗಾಧಿಕಾರಿ ಸುದರ್ಶನ್, ಆರೋಗ್ಯ ಇಲಾಖೆ ಮೈಸೂರು ವಿಭಾಗ ಜಂಟಿ ನಿರ್ದೇಶಕಿ ಮಲ್ಲಿಕಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥ್‌ಬಾಬು, ತಹಶೀಲ್ದಾರ್ ಲಿಖಿತಾ ಮೋಹನ್, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಎಚ್.ಆರ್.ರೇಖಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಮಹೇಂದ್ರ ಕಿರೀಟಿ, ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಸಂದೀಪ್, ಆರೋಗ್ಯ ಶಿಕ್ಷಣಾಧಿಕಾರಿ ಸುಧಾಕರ್, ಆರೋಗ್ಯ ರಕ್ಷಾ ಸಮಿತಿ ಸದಸ್ಯರು, ಬಗರ್ ಹುಕುಂ ಸಮಿತಿ ಸದಸ್ಯರು, ಕೆಡಿಪಿ ಸದಸ್ಯರು, ಗ್ಯಾರಂಟಿ ಅನುಷ್ಠಾನ ಸಮಿತಿ ಪದಾಧಿಕಾರಿಗಳು ಮತ್ತಿತರರು ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**